ಸಂಪುಟ : 9 ಸಂಚಿಕೆ 134 ಪುಟ : 4 ಬೆಲೆ: 3.00 ರವಿವಾರ ಜೂನ್ 30 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 134 Pages : 4 Price : 3.00 Sunday June 30 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜೂನ್ 30ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 21, 22 ವಿಜಯನಗರ ಶಾಲೆಯ ಭಾಗ, ಕಮತರ ಪ್ಲಾಟ್, ವಾಲ್ಮೀಕಿ ಭವನ, ಕುರಗಲ್ಲ ಲೇಔಟ್, ಕಣವಿ ಲೇಔಟ್, ಶಿಗ್ಗಾವಿ ಲೇಔಟ್, ಟವರ್ ಕಂಬ ಕೆಲವು ಉಳಿದ ಭಾಗಗಳು. ವಾರ್ಡ್ ನಂ. 7 ಪುಲಿಕೇಶಿ ರೋಡ, ಕಿಲ್ಲಾ ಓಣಿ, ಬಾರಕೇರ ಓಣಿ ಕೆಲವು ಉಳಿದ ಭಾಗಗಳು.

ವಾರ್ಡ್ ನಂ. 6 ಕೊಟಗಿ ಮಾಸ್ತರ್ ಲೈನ್ 4 ಭಾಗಗಳು. ವಾರ್ಡ್ ನಂ. 30, 34 ಹನುಮಂತ ದೇವರ ಗುಡಿ, ಡಿಪೋ ಹಿಂದಿನ ಭಾಗ, ಶಿವಾನಂದ ಗಾರ್ಡನ್, ಬಸವೇಶ್ವರ ಶಾಲೆ ಲೈನ್, ಮಸೂತಿ ಲೈನ್. ವಾರ್ಡ್ ನಂ. 28 ಪಂಚಾಕ್ಷರಿ ನಗರ 2ನೇ ಕ್ರಾಸ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 13,14 ಟ್ಯಾಗೋರ ರೋಡ್, ಹಣಗಿ ಜೀನ್ ಭಾಗ -1,2, ಜನತಾ ಗೋಡೌನ್ ಲೈನ್, ಕುರುಡಗಿಯವರ ಲೈನ್, ಕೊಣ್ಣೂರ ಅವರ ಲೈನ್, ಮಣಿಕಂಠ ಲೈನ್, ಡಿಕೆ ಮಾಸ್ಟರ್ ಲೈನ್, ಹೊಸಮನಿ ಲೈನ್, ವೆಂಕಟೇಶ ಟಾಕೀಸ್ ಲೈನ್, ಕಟ್ಟಿಮನಿಯವರ ಲೈನ್, ವಿ ಡಿ ಎಸ್ ಟಿ ಪಂಪ ಹೌಸ್ ಲೈನ್.

ವಾರ್ಡ್ ನಂ. 5 ಇಂಡಸ್ಟ್ರಿಯಲ್, ಪೆಟ್ರೋಲ್ ಬಂಕ್, ನೇಕಾರ ಕಾಲೋನಿ ಉಳಿದ ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಒತ್ತಾಯ

## ಹಾಲಿನ ಹೆಚ್ಚುವರಿ ಹಣ ರೈತರಿಗೆ ನೀಡಲಿ



■ವಿಜಯಸಾಕ್ಷಿ ಸುದ್ದಿ, ಗದಗ


ಅಧಿಕಾರ ಹಿಡಿಯುವದಕ್ಕಾಗಿ ಮತದಾರರಿಗೆ ಆಮಿಷ ಯೋಜನೆಗಳನ್ನು ಜಾರಿ ಮಾಡಿದ ರಾಜ್ಯ ಕಾಂಗ್ರೆಸ್ ಸರ್ಕಾರ ಅಗತ್ಯ ವಸ್ತುಗಳ ಬೆಲೆ ಏರಿಕೆ ಮೂಲಕ ಪ್ರತಿಯೊಬ್ಬರಿಂದಲೂ ಹಗಲು ದರೋಡೆ ಮಾಡುತ್ತಿರುವದನ್ನು ನಿಲ್ಲಿಸಲಿ ಎಂದು ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಮಾಲ್ಲಾಪೂರ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಮೇವು, ಧಾನ್ಯ, ಹಿಂಡಿ ಬೆಲೆ, ಆಳಿನ ಕೂಲಿ ಹೆಚ್ಚಾಗಿರುವ ಕಾರಣ ಪಶುಪಾಲನೆ ಲಾಭದಾಯಕವಾಗಿ ಉಳಿದಿಲ್ಲ. ಪರ್ಯಾಯ ಆದಾಯವೂ ಇಲ್ಲದೆ ಉಪಕಸುಬಾಗಿ ಹೈನುಗಾರಿಕೆಯಲ್ಲಿ ತೊಡಗಿದ್ದಾರೆ. ಕಾರಣ, ರೈತರ ಹಿತ ಕಾಪಾಡುವದು ಸರ್ಕಾರದ ಹೊಣೆಗಾರಿಕೆಯಾಗಿದ್ದು ಹೆಚ್ಚುವರಿ ಹಾಲಿನ ದರದ ಹಣವನ್ನು ಹಾಲಿನ ಉತ್ಪಾದಕರಿಗೆ ನೀಡಬೇಕು ಎಂದು ಹೇಳಿದ್ದಾರೆ.

ಈ ಹಿಂದೆ ರಾಜ್ಯದಲ್ಲಿ ಬಿಜೆಪಿ ಸರ್ಕಾರ ರೈತರ ಕಲ್ಯಾಣಕ್ಕಾಗಿ ಕೇಂದ್ರ ಸರ್ಕಾರದ ಕಿಸಾನ್ ಸಮ್ಮಾನ್ ಜೊತೆಗೆ 4 ಸಾವಿರ ರೂ ಸಹಾಯಧನ ಯೋಜನೆ, 11 ಲಕ್ಷ ರೈತ ಕುಟುಂಬಗಳ ವಿದ್ಯಾರ್ಥಿಗಳಿಗೆ ರೈತ ವಿದ್ಯಾನಿಧಿ, ಕಿಸಾನ್ ಕ್ರೆಡಿಟ್ ಹೊಂದಿರುವ ರೈತರಿಗೆ ಭೂ ಸಿರಿ ಯೋಜನೆ, ರೈತ ಶಕ್ತಿ ಯೋಜನೆಗಳನ್ನು ಸ್ಥಗಿತಗೊಳಿಸಿದ ಸಿದ್ದರಾಮಯ್ಯ ಸರ್ಕಾರ ಪ್ರತಿ ಲೀಟರ್ ಹಾಲಿಗೆ 5 ರೂ.ನಂತೆ ನೀಡುವ ಸಹಾಯಧನವನ್ನು ಈವರೆಗೂ ನೀಡದೆ ರೈತರ ಜೀವನದ ಜೊತೆ ಚೆಲ್ಲಾಟವಾಡುತ್ತಿದೆ.

ಏರಿಕೆ ಮಾಡಿರುವ ಹಾಲಿನ ಬೆಲೆಯ ಹಣವನ್ನು ಉತ್ಪಾದಕ ರೈತರಿಗೆ ನೀಡುವ ಆದೇಶವನ್ನು ಸರ್ಕಾರ ಕೂಡಲೇ ಹೊರಡಿಸಬೇಕು ಮತ್ತು ಬಿಜೆಪಿ ಸರ್ಕಾರದ ಅವಧಿಯಲ್ಲಿ ಇದ್ದ ರೈತಪರ ಯೋಜನೆಗಳನ್ನ ಮರಳಿ ಜಾರಿಗೆ ತರಬೇಕು ಎಂದು ಅವರು ಆಗ್ರಹಿಸಿದ್ದಾರೆ.

## ಬಸವರಾಜ ಬೊಮ್ಮಾಯಿಯವರಿಗೆ ಸನ್ಮಾನ ಇಂದು



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಮಾಜಿ ಮುಖ್ಯಮಂತ್ರಿ, ಹಾವೇರಿ-ಗದಗ ಮತಕ್ಷೇತ್ರದ ಸಂಸದರಾಗಿ ಆಯ್ಕೆಯಾದ ಬಸವರಾಜ ಬೊಮ್ಮಾಯಿ ಅವರಿಗೆ ಗದಗ ಮತಕ್ಷೇತ್ರದಿಂದ ಜೂನ್ 30ರ ಮಧ್ಯಾಹ್ನ 1.30 ಗಂಟೆಗೆ ಗದಗ ನಗರದ ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಸನ್ಮಾನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ವಹಿಸಲಿದ್ದು, ಶಾಸಕರಾದ ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ಮಾಜಿ ಸಚಿವರಾದ ಕಳಕಪ್ಪ ಬಂಡಿ, ವಿಧಾನ ಪರಿಷತ್ ಸದಸ್ಯರಾದ ಎಸ್.ವ್ಹಿ. ಸಂಕನೂರ, ಯುವ ನಾಯಕ ಅನಿಲ ಮೆಣಸಿನಕಾಯಿ ಸೇರಿದಂತೆ ಪಕ್ಷದ ಧುರೀಣರು ಪಾಲ್ಗೊಳ್ಳಲಿದ್ದಾರೆ.

ಈ ಸಭೆಗೆ ಪಕ್ಷದ ಕಾರ್ಯಕರ್ತರು, ಅಭಿಮಾನಿಗಳು, ಹಿತೈಷಿಗಳು, ಚುನಾಯಿತ ಪ್ರತಿನಿಧಿಗಳು, ಸಂಘ ಸಂಸ್ಥೆಯ ಪದಾಧಿಕಾರಿಗಳು ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಶಹರ ಅಧ್ಯಕ್ಷ ಅನಿಲ ಅಬ್ಬಿಗೇರಿ ಹಾಗೂ ಗ್ರಾಮೀಣ ಅಧ್ಯಕ್ಷ ದ್ಯಾಮಣ್ಣ ನೀಲಗುಂದ ಪತ್ರಿಕಾ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

## ಇಂದು ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಗದಗ ಹಾಗೂ ಬೆಟಗೇರಿ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ಜೂನ್ 30ರಂದು ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುವುದರಿಂದ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 4 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

ಸದರಿ ಉಪಕೇಂದ್ರಗಳಿಂದ ಪೂರೈಕೆಯಾಗುವ ಜಿಮ್ಸ್ ಆಸ್ಪತ್ರೆ, ಕುಡಿಯುವ ನೀರಿನ ಸ್ಥಾವರಗಳು, 33 ಕೆವ್ಹಿ ಐ.ಪಿಪಿ-ಕೆ.ಪಿ.ಸಿ.ಎಲ್, ನಾಗಾವಿ, ಮಲ್ಲಸಮುದ್ರ, ಪಯೋನಿರ್, ಟಿ.ಡಿ.ಪಿ ಎಲ್ 1, ಮತ್ತು 2, ಕೆ.ಎಚ್.ಬಿ ಹಾಗೂ ಎಲ್ಲಾ 11 ಕೆವ್ಹಿ ನಗರ, ಗ್ರಾಮೀಣ, ಕೈಗಾರಿಕಾ, ಸೋಲಾರ್ ಐ.ಪಿ.ಪಿ ಮತ್ತು ನೀರಾವರಿ ಪಂಪಸೆಟ್‌ಗಳ ವಿದ್ಯುತ್ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಕಾರಣ ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಹೆಸ್ಕಾಂ ಪ್ರಕಟಣೆ ವಿನಂತಿಸಿದೆ.

### ಕೃಷಿ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್

# ರೈತರು ಕಡ್ಡಾಯವಾಗಿ ವಿಮಾ ಕಂತು ಪಾವತಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ರೈತರು ತಮ್ಮ ಜಮೀನುಗಳಲ್ಲಿ ಬಿತ್ತನೆ ಮಾಡಿದ ಬೆಳೆಗಳಿಗೆ ತಪ್ಪದೇ ವಿಮಾ ಕಂತು ಪಾವತಿಸುವ ಮೂಲಕ ಪ್ರಕೃತಿ ವಿಕೋಪದಿಂದಾಗುವ ಆರ್ಥಿಕ ಸಂಕಷ್ಟದಿಂದ ಪಾರಾಗಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಕೃಷಿ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರೈತರು ಬೆಳೆಯುವ ವಿವಿಧ ಬೆಳೆಗಳಿಗೆ ಪ್ರತ್ಯೇಕವಾಗಿ ವಿಮಾ ಕಂತುಗಳನ್ನು ನಿಗದಿಪಡಿಸಲಾಗಿದೆ. ಅದರಂತೆ ವಿಮಾ ಕಂತು ಪಾವತಿಸಲು ಬೆಳೆಗಳಿಗೆ ಅನುಸಾರ ಪ್ರತ್ಯೇಕವಾಗಿ ಕೊನೆಯ ದಿನಾಂಕವನ್ನು ನಿಗದಿಪಡಿಸಿದ್ದು, ರೈತರು ಕೊನೆಯ ದಿನಾಂಕದವರೆಗೂ ಕಾಯದೇ ಮುಂಚಿತವಾಗಿ ತಾವು ಬೆಳೆದ ಬೆಳೆಗೆ ವಿಮಾ ಕಂತು ಪಾವತಿಸುವಂತೆ ಸೂಚಿಸಿದರು.

ಮುಂಗಾರು ಹಂಗಾಮಿನ ಬೆಳೆಗಳಿಗೆ ರೈತರು ಆ್ಯಪ್ ಮೂಲಕ ಸಮೀಕ್ಷೆ ಕೈಗೊಳ್ಳಲು ಅವಕಾಶ ನೀಡಲಾಗಿದ್ದು,

ರೈತರು ತಾವು ಬೆಳೆದ ಬೆಳೆಗಳ ವಿವರಗಳನ್ನು ಗೂಗಲ್ ಪ್ಲೇಸ್ಟೋರ್‌ನಿಂದ



ಮುಂಗಾರು ರೈತರ ಬೆಳೆ ಸಮೀಕ್ಷೆಯನ್ನು ಡೌನ್‌ಲೋಡ್ ಮಾಡಿಕೊಂಡು ಬೆಳೆ ವಿವರಗಳನ್ನು ದಾಖಲಿಸಬೇಕು. ಹೀಗೆ ವಿವರಗಳನ್ನು ದಾಖಲಿಸುವದರಿಂದ ರೈತರಿಗೆ ಕನಿಷ್ಠ ಬೆಂಬಲ ಬೆಲೆ ಯೋಜನೆ, ಬೆಳೆ ವಿಮೆ ಯೋಜನೆ, ಬರಗಾಲ ಮತ್ತು ಪ್ರವಾಹ ಸಂದರ್ಭದಲ್ಲಿ ನಷ್ಟ ಪರಿಹಾರ ಪಡೆಯಲು, ಪಹಣಿಯಲ್ಲಿ ಬೆಳೆ ವಿವರಗಳನ್ನು ದಾಖಲಿಸಲು ಮತ್ತು ಬೆಳೆಸಾಲ ಪಡೆಯುವಲ್ಲಿ ರೈತರಿಗೆ ಅನುಕೂಲವಾಗುತ್ತದೆ ಎಂದರು.

ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಜಿ.ಎಚ್. ಮಾತನಾಡಿ, ಜಿಲ್ಲೆಯಲ್ಲಿ ಜೂನ್ 28ಕ್ಕೆ ಕೊನೆಗೊಂಡಂತೆ 301548 ಹೆಕ್ಟೇರ್ ಪ್ರದೇಶದ ಬಿತ್ತನೆ ಗುರಿ ಇದ್ದು ಆ ಪೈಕಿ 278239 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ. ರೈತರಿಗೆ ಈಗಾಗಲೇ 4915.46 ಕ್ವಿಂಟಲ್ ಬಿತ್ತನೆ ಬೀಜ ವಿತರಣೆಯಾಗಿದ್ದು, ಇನ್ನೂ 1524 ಕ್ವಿಂಟಲ್ ಬಿತ್ತನೆ ಬೀಜ ಲಭ್ಯವಿದೆ ಎಂದರು.

> ಜಿಲ್ಲೆಯ ಪ್ರತಿಯೊಂದು ಬೀಜ ಹಾಗೂ ರಸಗೊಬ್ಬರಗಳ ಅಂಗಡಿಗಳಲ್ಲಿ ಲಭ್ಯವಿರುವ ರಸಗೊಬ್ಬರ ಹಾಗೂ ಬಿತ್ತನೆ ಬೀಜಗಳ ದರ ಹಾಗೂ ಪ್ರಮಾಣಗಳನ್ನು ಕಡ್ಡಾಯವಾಗಿ ಪ್ರಕಟಿಸಬೇಕು. ರೈತರುಗಳು ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳನ್ನು ಖರೀದಿಸಿದ ನಂತರ ತಪ್ಪದೇ ಸಂಬಂಧಿತ ಅಂಗಡಿಗಳಿಂದ ರಸೀದಿಯನ್ನು ಪಡೆದುಕೊಳ್ಳಬೇಕು. ಈ ಪ್ರಕ್ರಿಯೆಯಲ್ಲಿ ನಿರ್ಲಕ್ಷ್ಯ ತೋರಬಾರದು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

2024-25ನೇ ಸಾಲಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬೀಮಾ ಬೆಳೆ ವಿಮಾ ಯೋಜನೆಯನ್ನು ಜಿಲ್ಲೆಯಲ್ಲಿ ಅನುಷ್ಠಾನಗೊಳಿಸಲು ಓರಿಯೆಂಟಲ್ ಇನ್ಸೂರೆನ್ಸ್ ಕಂಪನಿ ಲಿಮಿಟೆಡ್ ಇವರನ್ನು ಸರ್ಕಾರ ಆಯ್ಕೆ ಮಾಡಿದ್ದು, ರೈತರು ಬೆಳೆ ವಿಮೆಗೆ ಸಂಬಂಧಿಸಿದ ಮಾಹಿತಿಗಾಗಿ ಓರಿಯೆಂಟಲ್ ಇನ್ಸೂರೆನ್ಸ್ ಕಂಪನಿಯ ಪ್ರತಿನಿಧಿಗಳನ್ನು ಸಂಪರ್ಕಿಸಬಹುದಾಗಿದೆ ಎಂದರು.

ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಶಶಿಕಾಂತ ಕೋಟಿಮನಿ ಮಾತನಾಡಿ, ನೀರಾವರಿ ಆಧಾರಿತ ಈರುಳ್ಳಿ ಹಾಗೂ ಕೆಂಪು ಮೆಣಸಿನಕಾಯಿ ಬೆಳೆಗಳಿಗೆ ರೈತರು ವಿಮೆಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಜುಲೈ 31 ಆಗಿದ್ದು, ಮಳೆ ಆಶ್ರಿತ

### ಇನ್ಸೂರನ್ಸ್ ಕಂಪನಿಯ ಪ್ರತಿನಿಧಿಗಳ ವಿವರ

ಜಿಲ್ಲಾ ಪ್ರತಿನಿಧಿ-ಮುತ್ತಣ್ಣ ಕಂಡಕಿ ಮೊ:8310428945, 9845928186; ಗದಗ ತಾಲೂಕು-ನಾಗರಾಜ ಕುರ್ತಕೋಟಿ ಮೊ: 7892387655; ಗಜೇಂದ್ರಗಡ ತಾಲೂಕು-ಫಕೀರಸಾಬ ಆರ್.ಗುರಿಕಾರ -ಮೊ: 9164098169; ಲಕ್ಷ್ಮೇಶ್ವರ ತಾಲೂಕು-ಮಹಾಂತೇಶ ಎಸ್. ಪ್ರಭಯ್ಯನವರಮ್ಠ ಮೊ: 8618234981, ಮುಂಡರಗಿ ತಾಲೂಕು-ವಿಠ್ಠಲ ಮರಡಿ ಮೊ: 9060604403; ನರಗುಂದ ತಾಲೂಕು -ಕರಿಯಪ್ಪ ಹಿರೇಕುರುಬರ ಮೊ: 9742603652; ರೋಣ ತಾಲೂಕು -ಮಂಜುನಾಥ ಚಟ್ಟಿ ಮೊ: 9611317070; ಶಿರಹಟ್ಟಿ ತಾಲೂಕು -ನಿಂಗಪ್ಪ ಎಲ್.ಲಮಾಣಿ ಮೊ: 9880611390.

ಕಂಬಾಳಿಮಠ, ಕೃಷಿ ಹಾಗೂ ತೋಟಗಾರಿಕಾ ಇಲಾಖೆಯ ತಾಲೂಕಾ ಅಧಿಕಾರಿಗಳು, ವಿವಿಧ ರೈತ ಸಮುದಾಯದ ಮುಖಂಡರು, ರೈತರು, ಇನ್ಸುರನ್ಸ್ ಕಂಪನಿಯ ಪ್ರತಿನಿಧಿಗಳು, ರಸಗೊಬ್ಬರದ ಅಂಗಡಿ ಮಾಲೀಕರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

### ತಾಲೂಕು ಮಟ್ಟದ ಶಾಲಾ ಶಿಕ್ಷಕರ ಅಡ್ವೋಕೆಶಿ ಕಾರ್ಯಾಗಾರ

# ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸೊಳ್ಳೆಗಳನ್ನು ಅಲಕ್ಷಿಸಿದರೆ ಪ್ರಾಣಾಂತಿಕ ಕಾಯಿಲೆಗಳು ಬರಬಹುದು. ಹಗಲು ಹೊತ್ತು ಕಚ್ಚುವ ಈಡೀಸ್ ಜಾತಿಯ ಸೊಳ್ಳೆಗಳು ಡೆಂಗಿಯಂತಹ ಕಾಯಿಲೆಗಳನ್ನು ಉಂಟುಮಾಡಬಲ್ಲವು. ಅದಕ್ಕಾಗಿ ಸೊಳ್ಳೆಗಳ ನಿಯಂತ್ರಣಕ್ಕಾಗಿ ಆರೋಗ್ಯ ಇಲಾಖೆಯೊಂದಿಗೆ ಎಲ್ಲರೂ ಕೈಜೋಡಿಸಬೇಕು ಎಂದು ಶಿರಹಟ್ಟಿ ತಾಲೂಕಾ ಆರೋಗ್ಯಾಧಿಕಾರಿ ಸುಭಾಷ್ ದಾಯಗೊಂಡ ಹೇಳಿದರು.

ಅವರು ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿಗಳ ಕಚೇರಿ ಗದಗ, ಲಕ್ಷ್ಮೇಶ್ವರ ತಾಲೂಕಾಡಳಿತ, ತಾಲೂಕಾ ಆರೋಗ್ಯ ಅಧಿಕಾರಿಗಳ ಕಚೇರಿ ಶಿರಹಟ್ಟಿ, ಸಮುದಾಯ ಆರೋಗ್ಯ ಕೇಂದ್ರ ಲಕ್ಷ್ಮೇಶ್ವರ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಶಿರಹಟ್ಟಿ ಇವರ ಸಂಯುಕ್ತ ಆಶ್ರಯದಲ್ಲಿ ಶನಿವಾರ ಡೆಂಗಿ ವಿರೋಧಿ ಮಾಸಾಚರಣೆ ಅಂಗವಾಗಿ ಶ್ರೀ ಉಮಾ ವಿದ್ಯಾಲಯ ಪುರಸಭೆಯ ಪ್ರೌಢಶಾಲೆಯಲ್ಲಿ ಹಮ್ಮಿಕೊಳ್ಳಲಾದ



ತಾಲೂಕು ಮಟ್ಟದ ಶಾಲಾ ಶಿಕ್ಷಕರ ಅಡ್ವೋಕೆಶಿ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯಕ ಮಾತನಾಡಿ, ಶಾಲೆಗಳಲ್ಲಿ ವಿದ್ಯಾರ್ಥಿಗಳ ಮುಖಾಂತರ ಸ್ವಚ್ಛತೆ, ಆರೋಗ್ಯ, ಮತ್ತು ನೈರ್ಮಲ್ಯದ ಕುರಿತಾಗಿ ಜಾಗೃತಿ ಮೂಡಿಸುವ ಸಂದೇಶವನ್ನು ಸಮಾಜಕ್ಕೆ ನೀಡಬೇಕಾಗಿದೆ. ನಮ್ಮ ಶಿಕ್ಷಕರು ಅದನ್ನು ಯಶಸ್ವಿಯಾಗಿ ಮಾಡುತ್ತಿದ್ದಾರೆ ಎಂದು ಅಭಿಪ್ರಾಯಪಟ್ಟರು.

ತಾಲೂಕಾ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಬಿ.ಎಸ್. ಹಿರೇಮಠ, ಆರೋಗ್ಯ ಶಿಕ್ಷಣಾಧಿಕಾರಿ ಜಗದೀಶ ಕೋಡಿಹಳ್ಳಿ, ಶಿಗ್ಲಿ ಆರೋಗ್ಯ ಶಿಕ್ಷಣಾಧಿಕಾರಿ ಪಿ.ಎಸ್. ಕರ್ಜಗಿ, ಸೂರಣಗಿಯ ಎಫ್.ಬಿ. ಹೂಗಾರ ಸಾಂಕ್ರಾಮಿಕ ರೋಗಗಳ ಕುರಿತು ಮಾಹಿತಿ ನೀಡಿದರು. ಉಮಾ ವಿದ್ಯಾಲಯ ಪ್ರೌಢಶಾಲೆಯ ಪ್ರಭಾರಿ ಮುಖ್ಯಶಿಕ್ಷಕ ವಿ.ಡಿ. ಹುಲಬಜಾರ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಿಲ್ಲಾ ಉಪ ಆರೋಗ್ಯ ಶಿಕ್ಷಣಾಧಿಕಾರಿ ಗೀತಾ ಕಾಂಬಳೆ, ಶಿರಹಟ್ಟಿ ಮಾಧ್ಯಮಿಕ ಶಾಲಾ ನೌಕರರ ಸಂಘದ ಅಧ್ಯಕ್ಷ ಎಚ್.ಟಿ. ಬಿಜ್ಜುರ, ಲಕ್ಷ್ಮೇಶ್ವರ ಘಟಕದ ಕಾರ್ಯದರ್ಶಿ ಗಿರೀಶ ಸುಗಜಾನರ, ಹಿರಿಯ ಶಿಕ್ಷಕ ಪಿ.ಎಸ್. ಪುರಾಣಮಠ, ಇ.ಸಿ.ಓ ಉಮೇಶ ಹುಚ್ಚಯ್ಯನಮಠ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

ಪ್ರೌಢ ವಿಭಾಗದ ಬಿ.ಆರ್.ಪಿ ಈಶ್ವರ ಮೆಡ್ಲೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು.

> ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಮಾತನಾಡಿದ ಜಿಲ್ಲಾ ಕೀಟಶಾಸ್ತ್ರಜ್ಞರಾದ ಅನ್ನಪೂರ್ಣೇಶ್ವರಿ ಶೆಟ್ಟರ, ಮನುಷ್ಯನ ದೇಹದಲ್ಲಿರುವ ಪ್ರೋಟೀನ್ ತಿಂದು ಬದುಕುವ ಈಡಿಸ್ ಜಾತಿಯ ಸೊಳ್ಳೆಗಳ ಕಚ್ಚುವಿಕೆಯಿಂದ ಮಾರಣಾಂತಿಕ ಡೆಂಗಿ ರೋಗ ಬರುತ್ತದೆ. ಇವುಗಳು ಸ್ವಚ್ಛ ನೀರಿನಲ್ಲಿ ತಮ್ಮ ಸಂತಾನ ಅಭಿವೃದ್ಧಿಯನ್ನು ಮಾಡುತ್ತವೆ. ಅದಕ್ಕಾಗಿ ನಮ್ಮ ಸುತ್ತಮುತ್ತಲು ಹಾಗೂ ಮನೆ, ಶಾಲೆಗಳಲ್ಲಿ ಸಂಗ್ರಹಿಸಿದ ನೀರನ್ನು ತೆರೆದಿಡಬಾರದು ಎಂದರು.

ಸಿಆರ್‌ಪಿಗಳಾದ ಸತೀಶ ಬೋಮಲೆ, ಉಮೇಶ ನೇಕಾರ, ಎನ್.ಎ.ಮುಲ್ಲಾ ನಿರ್ವಹಿಸಿದರು.ಲಕ್ಷ್ಮೇಶ್ವರ ಹಾಗೂ ಶಿರಹಟ್ಟಿ ತಾಲೂಕುಗಳ ಪ್ರೌಢಶಾಲೆಗಳ ವಿಜ್ಞಾನ ಶಿಕ್ಷಕರು ಕಾರ್ಯಾಗಾರದಲ್ಲಿ ಭಾಗವಹಿಸಿದ್ದರು.

### ಜಿಲ್ಲಾ ಮಟ್ಟದ ರಸ್ತೆ ಸುರಕ್ಷತಾ ಸಭೆಯಲ್ಲಿ ಎಸ್‌ಪಿ ಬಿ.ಎಸ್. ನೇಮಗೌಡ

# ರಸ್ತೆ ಕಾಮಗಾರಿ ಶೀಘ್ರ ಪೂರ್ಣಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಜನಸಾಮಾನ್ಯರ ದೈನಂದಿನ ಸಂಚಾರಕ್ಕೆ ಯಾವುದೇ ತರಹದ ಅಡೆತಡೆಯಾಗದಂತೆ ಸರ್ಕಾರದ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಬೇಕು. ಸಾಧ್ಯವಾದಷ್ಟು ನಿಗದಿತ ಅವಧಿಯೊಳಗೆ ಕಾಮಗಾರಿಗಳನ್ನು ಪೂರ್ಣಗೊಳಿಸುವ ಮೂಲಕ ಸುಗಮ ರಸ್ತೆ ಸಂಚಾರಕ್ಕೆ ಅನುವು ಮಾಡಿಕೊಡಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಸೂಚಿಸಿದರು.

ಗದಗ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಶನಿವಾರ ಜಿಲ್ಲಾ ಮಟ್ಟದ ರಸ್ತೆ ಸುರಕ್ಷತಾ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ನಿಗದಿಪಡಿಸಿದ ಅಭಿವೃದ್ಧಿ ಕಾಮಗಾರಿಗಳಾದ ರಸ್ತೆ ನಿರ್ಮಾಣ, ಬ್ರಿಡ್ಜ್ ನಿರ್ಮಾಣ, ಚರಂಡಿ ನಿರ್ಮಾಣ, ಬೀದಿದೀಪ



ಕಾಮಗಾರಿಗಳನ್ನು ಇಲಾಖೆ ನಿರ್ದಿಷ್ಟಪಡಿಸಿದ ಅವಧಿಯೊಳಗೆ ಗುತ್ತಿಗೆದಾರರು ಪೂರ್ಣಗೊಳಿಸಬೇಕು. ಈ ಬಗ್ಗೆ ಅನುಷ್ಠಾನ ಇಲಾಖೆಗಳು ನಿರಂತರ ನಿಗಾ ವಹಿಸುವ ಮೂಲಕ ಕಾಮಗಾರಿ ಪೂರ್ಣಗೊಳಿಸುವಲ್ಲಿ ಗಮನ ಹರಿಸಬೇಕು ಎಂದರು.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಸಭೆಯ ಅಧ್ಯಕ್ಷತೆ ವಹಿಸಿ ಸಂಚಾರಿ ನಿಯಮಗಳ ಪಾಲನೆ ಮಾಡಲು ಸಾರ್ವಜನಿಕರಿಗೆ ನಿಗದಿತ ಸ್ಥಳಗಳಲ್ಲಿ ಸೂಚನಾ ಫಲಕಗಳನ್ನು ನೀಡಬೇಕು. ರಸ್ತೆ ತಿರುವುಗಳಲ್ಲಿ, ಶಾಲಾ ಕಾಲೇಜುಗಳ ಹತ್ತಿರದ ರಸ್ತೆಗಳಲ್ಲಿ ವಾಹನಗಳು ನಿಧಾನಗತಿಯಿಂದ ಚಲಿಸುವಂತೆ ಮಾಡಲು ರಸ್ತೆ ತಡೆಗಳನ್ನು ಮಾರ್ಗಸೂಚಿಯನ್ವಯ ಮಾಡಬೇಕು. ಅವೈಜ್ಞಾನಿಕ ರಸ್ತೆ ತಡೆಗಳ ನಿರ್ಮಾಣ ಬೇಡ ಎಂದರು.

ರಾಷ್ಟ್ರೀಯ ಹೆದ್ದಾರಿ ಕಳಸಾಪುರ ಕ್ರಾಸ್‌ನಲ್ಲಿ ಪದೇ ಪದೇ ಅಪಘಾತಗಳು ಸಂಭವಿಸುತ್ತಿವೆ. ಈ ಬಗ್ಗೆ ಸಂಬಂಧಿತ ಇಲಾಖೆಯ ಅಧಿಕಾರಿಗಳು ಆ ಪ್ರದೇಶದಲ್ಲಿ ಸೂಕ್ತ ವ್ಯವಸ್ಥೆ ಮಾಡುವ ಮೂಲಕ ಅಪಘಾತಗಳನ್ನು ತಡೆಯಲು ಮುಂದಾಗಬೇಕು. ಈ ಕ್ರಮ ಆದ್ಯತೆ ಮೇರೆಗೆ ಕೈಗೊಳ್ಳುವಂತೆ ಸೂಚನೆ ನೀಡಿದರು. ಜಿಲ್ಲೆಯ ಸೊರಟೂರು ಹತ್ತಿರ ನಿರ್ಮಾಣವಾಗುತ್ತಿರುವ ಬ್ರಿಡ್ಜ್ ಕಾಮಗಾರಿಯನ್ನು ಒಂದು ತಿಂಗಳೊಳಗಾಗಿ ಪೂರ್ಣಗೊಳಿಸುವ ಮೂಲಕ ಸಾರ್ವಜನಿಕರ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕು. ಅಲ್ಲದೇ ಕೇಶಿಪ್ ಸಂಸ್ಥೆಯಿಂದ ಕೈಗೊಂಡಿರುವ ಗದಗ-ಹೊನ್ನಾಳಿ ರಸ್ತೆ ನಿರ್ಮಾಣ ಕಾಮಗಾರಿ ಶೀಘ್ರ ಪೂರ್ಣಗೊಳಿಸಲು ಸೂಚಿಸಿದರು.

ಸಭೆಯಲ್ಲಿ ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯಂತರ ರಮೇಶ ಪಾಟೀಲ, ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿ ಮಂಜುನಾಥ ಶಿರಾಳೆ, ನಗರಸಭೆ ಪೌರಾಯುಕ್ತ ಪ್ರಶಾಂತ ವರಗಪ್ಪನವರ, ಕೆ.ಎಸ್.ಆರ್.ಟಿ.ಸಿ. ವಿಭಾಗೀಯ ನಿಯಂತ್ರಣಾಧಿಕಾರಿಗಳು ಸೇರಿದಂತೆ ಇತರರು ಇದ್ದರು.

> ಸಂಚಾರ ವ್ಯವಸ್ಥೆಗೆ ಅಭಿವೃದ್ಧಿ ಕಾಮಗಾರಿಗಳು ಅಡೆತಡೆಯಾಗಬಾರದು. ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವಾಗ ವಿನಾಕಾರಣ ವಿಳಂಬ ಧೋರಣೆ ಅನುಸರಿಸಬಾರದು. ಕಾಮಗಾರಿ ಸ್ಥಳದಲ್ಲಿ ಸಾರ್ವಜನಿಕರ ಓಡಾಟಕ್ಕೆ ಪ್ರತ್ಯೇಕ ವ್ಯವಸ್ಥೆ ಕಲ್ಪಿಸುವ ಮೂಲಕ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕು. ಇದಾವುದನ್ನೂ ಮಾಡದೇ ಕಾಮಗಾರಿ ಕೈಗೊಂಡರೆ ಅಪಘಾತವಾದಲ್ಲಿ ಅಥವಾ ಪ್ರಕರಣ ದಾಖಲಿಸುವ ಎಚ್ಚರಿಕೆಯನ್ನು ಎಸ್‌ಪಿ ಬಿ.ಎಸ್. ನೇಮಗೌಡ ನೀಡಿದರು.

## ಸಂಪಾದಕೀಯ

# ಮಠಾಧೀಶರು ಮತ್ತು ರಾಜಕಾರಣ

ಧರ್ಮ ಪ್ರಸಾರ, ಶಾಂತಿ-ಸಹಬಾಳ್ವೆಯ ಬೋಧನೆ ಮಾಡುತ್ತಾ ಧಾರ್ಮಿಕ, ಶೈಕ್ಷಣಿಕ, ಸಾಮಾಜಿಕ ಸೇವೆಗಳಲ್ಲಿ ನಿರತರಾಗಿದ್ದ ಮಠಾಧೀಶರು ಇವತ್ತು ರಾಜಕಾರಣಕ್ಕೂ ಕಾಲಿಟ್ಟಾಗಿದೆ. ಚುನಾವಣೆಯಲ್ಲಿ ಟಿಕೆಟ್ ಘೋಷಣೆಯಿಂದ ಹಿಡಿದು, ಚುನಾವಣೆಯಲ್ಲಿ ಗೆದ್ದ ನಂತರ ಮಂತ್ರಿ, ಮುಖ್ಯಮಂತ್ರಿವರೆಗೂ ಯಾರಾಗಬೇಕು, ಯಾಕಾಗಬೇಕು ಎನ್ನುವ ಬಗ್ಗೆ ಮಠಾಧೀಶರು ತಮ್ಮದೇ ವ್ಯಾಖ್ಯಾನವನ್ನು ಸಮಾಜದ ಮುಂದಿಡುತ್ತಿದ್ದಾರೆ.

ಈಗ ಅಂಥದ್ದೆ ಒಂದು ಹೇಳಿಕೆ ರಾಜ್ಯ ರಾಜಕಾರಣದಲ್ಲಿ ಕೋಲಾಹಲ ಸೃಷ್ಟಿಸಿದೆ. ಕೆಂಪೇಗೌಡ ಜಯಂತಿ ದಿನ ಮಠಾಧೀಶರೊಬ್ಬರು ಸಿದ್ದರಾಮಯ್ಯ ಅವರಿಗೆ ಮುಖ್ಯಮಂತ್ರಿ ಹುದ್ದೆ ಬಿಟ್ಟುಕೊಡುವಂತೆ ಆಡಿದ ಮಾತು ಇವತ್ತು ಆಡಳಿತ ಪಕ್ಷದಲ್ಲಿ ಬಿರುಕು ಮೂಡುವ ಹಂತಕ್ಕೆ ಬಂದಿದೆ. ಕೆಲ ತಿಂಗಳ ಹಿಂದಷ್ಟೆ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸುತ್ತಿದ್ದ ಕಾಂಗ್ರೆಸ್ ನಾಯಕರು, ಇವತ್ತು ತಮ್ಮದೇ ಪಕ್ಷದ ಸದಸ್ಯರ ವಿರುದ್ಧ ಪರಸ್ಪರ ತೊಡೆ ತಟ್ಟುವಂತ ಕೆಲಸಕ್ಕೆ ಮುಂದಾಗಿದ್ದಾರೆ.

ಹೀಗೆ ಮಠಾಧೀಶರ ಹೇಳಿಕೆಯಿಂದ ರಾಜಕೀಯ ವ್ಯವಸ್ಥೆಯಲ್ಲಿ ಕೋಲಾಹಲ ಸೃಷ್ಟಿಯಾಗುತ್ತಿರುವುದು ಇದೇ ಮೊದಲೇನಲ್ಲ. ಮತ್ತು ಇದು ಕೊನೆಯದ್ದು ಅಲ್ಲ. ಭವಿಷ್ಯದಲ್ಲಿ ಮಠಾಧೀಶರು ಇನ್ನಷ್ಟು ಪ್ರಭಾವಿಯಾಗಿ, ರಾಜಕಾರಣದ ಮೇಲೆ ಹಿಡಿತ ಸಾಧಿಸಿದರೂ ಅಚ್ಚರಿ ಪಡಬೇಕಾಗಿಲ್ಲ. ಆದರೆ ಇಲ್ಲಿ ಹೇಳಬೇಕಾಗಿರುವುದು ಇಷ್ಟೆ, ಮಠಾಧೀಶರಾದವರು ರಾಜಕಾರಣಿಗಳಿಗೆ ಮಾರ್ಗದರ್ಶನ ಮಾಡಲಿ. ಆದರೆ ನೇರವಾಗಿ ರಾಜಕಾರಣಕ್ಕೆ ಇಳಿಯುವುದು ಸರಿಯಲ್ಲ.

ಸಮಾಜದಲ್ಲಿ ಶಾಂತಿ ಸೌಹಾರ್ದತೆ ಸೃಷ್ಟಿಸಬೇಕಾದ ಮಠಾಧೀಶರು ನೀಡುವ ಹೇಳಿಕೆಗಳಿಂದ ರಾಜಕೀಯ ವಲಯದಲ್ಲಿ ಚರ್ಚೆ ಮಾತ್ರವಲ್ಲದೇ, ಅವರ ವಿರುದ್ಧವೂ ನಿಂದನೆಗಳು ವ್ಯಕ್ತವಾಗುತ್ತವೆ. ಶ್ರೀಗಳ ಅಭಿಪ್ರಾಯ ವಿರೋಧಿಸುವ ಒಂದು ವರ್ಗ, ಮಠಾಧೀಶರ ಗೌರವ ಘನತೆಗೆ ಧಕ್ಕೆ ತರುವ ಕೆಲಸ ಮಾಡುತ್ತದೆ. ಅಂಥ ವರ್ಗದ ಬಗ್ಗೆ ಎಚ್ಚರಿಕೆ ಇಟ್ಟುಕೊಂಡು ಮಠಾಧೀಶರಾದವರು ನಡೆದುಕೊಂಡು ಸಮಾಜಕ್ಕೆ ಒಳ್ಳೆಯ ಸಂದೇಶ ನೀಡುವಂತಾಗಬೇಕು.

ಶ್ರೀಗಳು ತಮ್ಮ ಅಭಿಪ್ರಾಯ ತಿಳಿಸಿರುವುದು ತಪ್ಪು ಎನ್ನುವುದು ಪತ್ರಿಕೆ ಆಶಯ ಅಲ್ಲ. ಆದರೆ ಅದರಿಂದ ಆಗುವ ಅನಾಹುತಗಳ ಬಗ್ಗೆಯೂ ಮಠಾಧೀಶರಿಗೆ ಎಚ್ಚರಿಕೆ ಇರಬೇಕು. ಹೇಳಬೇಕಾದ ವಿಷಯವನ್ನು ನೇರವಾಗಿ ಅವರನ್ನು ಕರೆದು ಹೇಳಬಹುದಿತ್ತು. ಆದರೆ ಸರಕಾರಿ ಕಾರ್ಯಕ್ರಮವೊಂದರಲ್ಲಿ ರಾಜಕೀಯ ಪ್ರೇರಿತ ಮಾತುಗಳು ಯಾರಿಗೂ ಶೋಭೆ ತರುವುದಿಲ್ಲ ಎನ್ನುವದನ್ನು ಎಲ್ಲರೂ ಅರ್ಥ ಮಾಡಿಕೊಳ್ಳಬೇಕು.

---

**ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರ ಸಂಕಲ್ಪದಂತೆ ಮತ್ತೆ ಶಿವಾನುಭವ**

# ನರೇಗಲ್ಲದಲ್ಲಿ ಶಿವಾನುಭವ ಪುನರಾರಂಭ



■ ವಿಜಯಸಾಕ್ಷಿ ಸುದ್ದಿ, ನರೇಗಲ್

ಲಿಂ. ಡಾ ಅಭಿನವ ಅನ್ನದಾನ ಮಹಾಸ್ವಾಮಿಗಳವರ ಕಾಲದಲ್ಲಿ ಪ್ರಾರಂಭಗೊಂಡಿದ್ದ ಶಿವಾನುಭವವು ಕಾರಣಾಂತರಗಳಿಂದ ಸ್ಥಗಿತಗೊಂಡಿತ್ತು. ಈಗ ಮತ್ತೆ ಅದಕ್ಕೆ ಚಾಲನೆ ದೊರೆತಿದ್ದು, ಸದ್ಯದ ಪೀಠಾಧಿಪತಿಗಳಾಗಿರುವ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರ ಸಂಕಲ್ಪದಂತೆ ಮತ್ತೆ ಶಿವಾನುಭವ ಕಾರ್ಯಕ್ರಮವು ಜೂನ್ 30ರ ಸಂಜೆ 6.30ಕ್ಕೆ ಪ್ರಾರಂಭಗೊಳ್ಳಲಿದೆ ಎಂದು ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿಯ ಆಡಳಿತಾಧಿಕಾರಿ ಎನ್.ಆರ್. ಗೌಡರ ಹೇಳಿದರು.

ಶನಿವಾರ ಈ ಕುರಿತು ಶ್ರೀಮಠದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಶಿವಾನುಭವದ ವಿವರಗಳನ್ನು ನೀಡಿ ಅವರು ಮಾತನಾಡಿದರು.

ಪುನಃ ಪ್ರಾರಂಭಗೊಳ್ಳಲಿರುವ ಶಿವಾನುಭವವು 51ನೇ ಶಿವಾನುಭವವಾಗಿದ್ದು, ಇದನ್ನು ಶ್ರೀ ಅನ್ನದಾನೇಶ್ವರ ಶಿವಾನುಭವ ಮಂಟಪದಲ್ಲಿ ಹಾಲಕೆರೆ ಸಂಸ್ಥಾನ ಮಠದ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರು ದಿವ್ಯ ಸಾನ್ನಿಧ್ಯ ವಹಿಸಿ ಉದ್ಘಾಟಿಸಲಿದ್ದಾರೆ. ಲಿಂಗಸೂರಿನ ಲೇಖಕ ಗಿರಿರಾಜ ಹೊಸಮನಿ ಮುಖ್ಯ ಉಪನ್ಯಾಸಕಾರರಾಗಿ ಆಗಮಿಸಲಿದ್ದು, ಅವರು ಲಿಂ. ಗುರು ಅನ್ನದಾನ ಮಹಾಸ್ವಾಮಿಗಳವರ ಶಿಕ್ಷಣ ಪ್ರೇಮ ಕುರಿತು ಮಾತನಾಡಲಿದ್ದಾರೆ.

ಹಾಲಕೆರೆ ಶ್ರೀ ಅನ್ನದಾನೇಶ್ವರ ಮಠದ ಅಕ್ಷರ ಭಾರತ ಪ್ರತಿಷ್ಠಾನ ಗದಗ ಹಾಗೂ ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿ ಇವುಗಳ ಸಹಯೋಗದಲ್ಲಿ ಈ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದರು.

ಈ ಶಿವಾನುಭವವು ಪ್ರತಿ ತಿಂಗಳ ಕೊನೆಯ ದಿನದಂದು ಸಂಜೆ 6.30ರಿಂದ 8ರವರೆಗೆ ಜರುಗಲಿದ್ದು, ಆಸಕ್ತರು ಇದರ ಲಾಭ ಪಡೆದುಕೊಳ್ಳಬೇಕೆಂದು ಗೌಡರ ಕೋರಿದರು. ಈ ಸಂದರ್ಭದಲ್ಲಿ ನಿವೃತ್ತ ಪ್ರಾಚಾರ್ಯ ಸಿ.ಐ. ಮರಡಿಮಠ, ಮಲ್ಲಿಕಾರ್ಜುನಪ್ಪ ಮೆಣಸಿಗಿ, ಮುಖ್ಯ ಶಿಕ್ಷಕ ಎಸ್. ಎನ್. ಹೂಲಗೇರಿ ಮತ್ತು ಶ್ರೀಮಠದ ಅನೇಕ ಭಕ್ತರು ಪಾಲ್ಗೊಂಡಿದ್ದರು.

ಪುನರ್ ಪ್ರಾರಂಭಗೊಳ್ಳಲಿರುವ ಶಿವಾನುಭವದ ಮೂಲಕ ಶೈಕ್ಷಣಿಕ ಪ್ರಗತಿ, ಕೃಷಿ ಪರ ಸಂವಾದ, ಪ್ರದರ್ಶನಗಳು, ಪರಿಸರ ಕಾಳಜಿ, ಪರಿಸರದ ಬಗ್ಗೆ ಜಾಗೃತಿ, ಅರಣ್ಯಾಭಿವೃದ್ಧಿ, ಧಾರ್ಮಿಕ ಚಿಂತನೆಗಳು, ವಿದ್ಯಾರ್ಥಿಗಳಲ್ಲಿ, ಯುವಕರಲ್ಲಿ ದೇಶಭಕ್ತಿ ಬೆಳೆಸುವುದು, ನೈತಿಕ ಶಿಕ್ಷಣ ನೀಡುವಂತಹ ಅನೇಕ ಕಾರ್ಯಕ್ರಮಗಳನ್ನು ಇದರಲ್ಲಿ ಅಳವಡಿಸುವ ವಿಚಾರವನ್ನು ಶ್ರೀಗಳು ಇರಿಸಿಕೊಂಡಿದ್ದಾರೆ. ಅದಕ್ಕೆ ಸರ್ವರೂ ಕೈಗೂಡಿಸಿ ಯಶಸ್ವಿಗೊಳಿಸೋಣ ಎಂದು ಹೇಳಿದರು.

---

**ಪ್ರಾಚಾರ್ಯ ಡಾ. ಎಸ್.ಎಫ್. ಸಿದ್ನೇಕೊಪ್ಪರಿಗೆ ವಿದ್ಯಾರ್ಥಿಗಳಿಂದ ಗುರುವಂದನೆ**

# ಹೆಜ್ಜೆ ಗುರುತು ಉಳಿಯುವಂತೆ ಕಾಯಕವಿರಬೇಕು

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಕಾಲೇಜುಗಳಲ್ಲಿ ಓದುವವರಲ್ಲಿ ಶೇ.90ರಷ್ಟು ಜನ ಬಡವರ, ರೈತರ ಮಕ್ಕಳು. ಅದರಲ್ಲೂ ಗ್ರಾಮೀಣ ಪ್ರದೇಶ ಹಿನ್ನೆಲೆಯುಳ್ಳವರು. ಅವರಿಗೂ ಖಾಸಗಿ ಕಾಲೇಜುಗಳಲ್ಲಿ ಸಿಗುವ ಸೌಲಭ್ಯಗಳು ಸಿಗುವಂತಾಗಲು ತಾವು ಪ್ರಾಮಾಣಿಕ ಪ್ರಯತ್ನ ಮಾಡಿದ್ದಾಗಿ ಡಾ. ಎಸ್.ಎಫ್. ಸಿದ್ನೇಕೊಪ್ಪ ಹೇಳಿದರು.

ಬೆಟಗೇರಿ ಹೊರವಲಯದ ನಾಗಸಮುದ್ರ ರಸ್ತೆಯಲ್ಲಿರುವ ಸರ್ಕಾರಿ ಪ್ರಥಮದರ್ಜೆ ಕಾಲೇಜು ಹಾಗೂ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಪ್ರಾಚಾರ್ಯರಾಗಿರುವ ಡಾ. ಎಸ್.ಎಫ್. ಸಿದ್ನೇಕೊಪ್ಪ ಅವರು ಜೂ.30ರಂದು ನಿವೃತ್ತಿಗೊಳ್ಳಲಿರುವ ನಿಮಿತ್ತ ಶನಿವಾರ ಕಾಲೇಜು ಸಭಾಂಗಣದಲ್ಲಿ ವಿದ್ಯಾರ್ಥಿಗಳು ಆಯೋಜಿಸಿದ್ದ 'ಹೃದಯಸ್ಪರ್ಶಿ' ಗುರುವಂದನಾ ಕಾರ್ಯಕ್ರಮದಲ್ಲಿ



ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಹಿಂದೆಲ್ಲ ಇಂದಿನಂತೆ ಸಂಪರ್ಕಕ್ಕೆ 4ಜಿ, 5ಜಿ ಇರಲಿಲ್ಲ. ಅಂದು ವಿದ್ಯಾರ್ಥಿಗಳ ಹಿಂದೆ 'ಗುರೂ'ಜಿ ಇದ್ದರು. ಆ ಕಾರಣಕ್ಕೆ 'ಶಿಕ್ಷಕರು' ನಮಗೆ ಕರ್ಣನ ಕವಚ ಇದ್ದಂತೆ. ಅವರನ್ನು ಸದಾ ಗೌರವಿಸಬೇಕು ಎಂದು ಹೇಳಿದ ಅವರು, ನಿವೃತ್ತಿ ಸರ್ಕಾರದ ನಿಯಮ. ಆದರೆ, ನಮ್ಮ ಬಳಿಕವೂ ನಮ್ಮ ಹೆಜ್ಜೆ ಗುರುತುಗಳು ಉಳಿಯುವಂತೆ ನಮ್ಮ ಕಾಯಕ ಇರಬೇಕು. ಆ ಸಂತೃಪ್ತಿ ನನ್ನದಾಗಿದೆ ಎಂದು ಹೇಳಿ, ನನಗೆ ಅತಿಥಿ ಉಪನ್ಯಾಸಕರು, ಬೋಧಕ-ಬೋಧಕೇತರ ಸಿಬ್ಬಂದಿ ನೀಡಿದ ಸಹಕಾರ ಮರೆಯಲಾರೆ ಎಂದರು.

ಡಾ. ಎಸ್.ಎಫ್. ಸಿದ್ನೇಕೊಪ್ಪ ಅವರ ನಿವೃತ್ತಿ ನಿಮಿತ್ತ ಕಾಲೇಜಿನಲ್ಲಿ ವಿದ್ಯಾರ್ಥಿಗಳು ಹಮ್ಮಿಕೊಂಡಿದ್ದ 'ಗುರುವಂದನಾ' ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ನರೇಗಲ್ ಸರ್ಕಾರಿ ಪದವಿ ಕಾಲೇಜಿನ ಪ್ರಾಚಾರ್ಯ ಡಾ. ಎಸ್.ಎಲ್. ಗುಳೇದಗುಡ್ಡ, ಪ್ರೊ. ಶೇಷಾದ್ರಿ, ಪ್ರೊ. ಮಹಾಂತೇಶ ಸೇರಿ ಹಲವರು ಮಾತನಾಡುತ್ತಿದ್ದಾಗ ಕೆಲ ಹೊತ್ತು ಭಾವುಕರಾದರು. ಕೆಲ ವಿದ್ಯಾರ್ಥಿಗಳು ಡಾ.ಸಿದ್ನೇಕೊಪ್ಪ ಅವರ ಕುರಿತು ಕವನ ವಾಚನ ಮಾಡಿದರೆ, ಮತ್ತೆ ಕೆಲವರು ಅನಿಸಿಕೆಗಳನ್ನು ಹಂಚಿಕೊಂಡರು.

ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಪ್ರಾಚಾರ್ಯ ಡಾ. ಶಿವಪ್ಪ ಕುರಿ, ಡಾ. ಆರ್.ಎಂ. ಕಲ್ಲನಗೌಡ್ರ, ಪ್ರೊ. ಕಾಶಪ್ಪನವರ, ಸರ್ಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘದ ರಾಜ್ಯಾಧ್ಯಕ್ಷ ಡಾ. ಹನಂತಗೌಡ ಆರ್. ಕಲ್ಮನಿ ಸೇರಿ ಹಲವರು ಮಾತನಾಡಿದರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾಧ್ಯಕ್ಷ ರಾಜು ಎಂ.ಹೆಬ್ಬಳ್ಳಿ, ಪತ್ರಕರ್ತ ಜಗದೀಶ ಕುಲಕರ್ಣಿ ಸೇರಿ ಹಲವರು ವೇದಿಕೆಯಲ್ಲಿದ್ದರು. ಬಳಿಕ ಡಾ. ಎಸ್.ಎಫ್. ಸಿದ್ನೇಕೊಪ್ಪ ಅವರಿಗೆ ವಿದ್ಯಾರ್ಥಿಗಳು ಗುರುವಂದನೆ ಮೂಲಕ ಸನ್ಮಾನಿಸಿ, ಗೌರವಿಸಿದರು.

ಇದೇ ಸಂದರ್ಭದಲ್ಲಿ ಕಾಲೇಜಿನ ಹಿರಿಯ ಉಪನ್ಯಾಸಕ ಖಲೀಲ್ ಅಹ್ಮದ್ ಚಿಕ್ಕೇರೂರ ಅವರಿಗೆ ಡಾ. ಎಸ್.ಎಫ್. ಸಿದ್ನೇಕೊಪ್ಪ ಅವರು ಪ್ರಾಚಾರ್ಯ ಹುದ್ದೆಯನ್ನು ಹಸ್ತಾಂತರ ಮಾಡಿದರು. ಡಾ.ಕಸ್ತೂರಿ ದಳವಾಯಿ ನಿರೂಪಿಸಿದರು. ಪ್ರೊ. ಉಮಾ ಕಣವಿ ಸ್ವಾಗತಿಸಿದರು. ಡಾ. ಹನಂತಗೌಡ ಆರ್.ಕಲ್ಮನಿ ಅವರು ವಂದಿಸಿದರು.

ಡಾ. ಎಸ್.ಎಫ್. ಸಿದ್ನೇಕೊಪ್ಪ ಅವರನ್ನು ಕಾಲೇಜಿನ ಸಭಾಂಗಣದಲ್ಲಿ ವಿದ್ಯಾರ್ಥಿಗಳು ಕಾಲೇಜಿನ ವಿದ್ಯಾರ್ಥಿನಿಯರು, ಮಹಿಳಾ ಪ್ರಾಧ್ಯಾಪಕರು 'ಪೂರ್ಣಕುಂಭ'ದೊಂದಿಗೆ ಸ್ವಾಗತಿಸಿದ್ದು ವಿಶೇಷವಾಗಿತ್ತು. ಮತ್ತೊಂದೆಡೆ ಕಾಲೇಜಿನ ವಿದ್ಯಾರ್ಥಿಗಳು, ವಿದ್ಯಾರ್ಥಿನಿಯರು ಅಷ್ಟೇ ಅಲ್ಲ, ಇಡೀ ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಅವರವರ ಸಾಂಪ್ರದಾಯಿಕ ಉಡುಗೆ-ತೊಡುಗೆ ತೊಟ್ಟು ಗಮನ ಸೆಳೆದರು.

### ಹಲವರ ಸ್ಮರಣೆ

ನನಗೆ ಪ್ರಸ್ತುತ ವಿಧಾನ ಪರಿಷತ್ ಸದಸ್ಯರಾಗಿರುವ ಎಸ್.ವಿ. ಸಂಕನೂರ ಅವರಾದಿಯಾಗಿ ಹಲವರು ಜ್ಞಾನ ಕೊಟ್ಟರೆ, ಸಚಿವರಾದ ಎಚ್.ಕೆ. ಪಾಟೀಲ ಅವರು ಉಪನ್ಯಾಸಕರಾಗಲು ನೆರವು ನೀಡಿ, ಬದುಕು ಕಟ್ಟಿಕೊಟ್ಟವರು. ಇದರ ಮಧ್ಯೆ ನನ್ನ ಚಿಕ್ಕಪ್ಪ ದಿ.ರಾಜೇಸಾಬ ಸಿದ್ನೆಕೊಪ್ಪ, ತಂದೆ-ತಾಯಿ ಸೇರಿ ಇಡೀ ನನ್ನ ಕುಟುಂಬ ನನ್ನ ಏಳ್ಗೆಯಲ್ಲಿ ಬಹುಮುಖ್ಯ ಪಾತ್ರವಹಿಸಿದೆ ಎಂದು ಡಾ. ಎಸ್.ಎಫ್. ಸಿದ್ನೇಕೊಪ್ಪ ನೆನೆದರು.

---

# ಪತ್ರಕರ್ತರ ಸಂಘದ ಪದಾಧಿಕಾರಿಗಳ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಇಲ್ಲಿನ ಸಂಯುಕ್ತ ಕರ್ನಾಟಕ ಪತ್ರಿಕೆಯ ವರದಿಗಾರ ಆದರ್ಶ ಕುಲಕರ್ಣಿ ನರೇಗಲ್ ಹೋಬಳಿ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದರು.

ನಿಕಟಪೂರ್ವ ಅಧ್ಯಕ್ಷ ಈಶ್ವರ ಬೆಟಗೇರಿ ಅಧ್ಯಕ್ಷತೆ ವಹಿಸಿದ್ದರು. ನೂತನ ಅಧ್ಯಕ್ಷ ಆದರ್ಶ ಕುಲಕರ್ಣಿ ಮಾತನಾಡಿ, ನನ್ನ ಮೇಲೆ ವಿಶ್ವಾಸವನ್ನಿಟ್ಟು ಅಧ್ಯಕ್ಷ ಸ್ಥಾನಕ್ಕೆ ಆಯ್ಕೆ ಮಾಡಿದ ಎಲ್ಲ ಪತ್ರಕರ್ತ ಮಿತ್ರರಿಗೆ ನನ್ನ ಹೃತ್ಪೂರ್ವಕ ವಂದನೆಗಳು. ನಿಮ್ಮ ನಿರೀಕ್ಷೆಗೆ ತಕ್ಕಂತೆ ಕಾರ್ಯ ನಿರ್ವಹಿಸಿ, ನಾನು ಮತ್ತು ನನ್ನ ತಂಡ ಗದಗ ಜಿಲ್ಲೆಯಲ್ಲಿಯೇ ಇದನ್ನೊಂದು ಮಾದರಿ ಸಂಘವನ್ನಾಗಿ ಮಾಡುತ್ತೇವೆ ಎಂದರು.

ನಿಕಟಪೂರ್ವ ಅಧ್ಯಕ್ಷ ಈಶ್ವರ ಬೆಟಗೇರಿ ಮಾತನಾಡಿ, ಕಳೆದ ಮೂರು ವರ್ಷಗಳ ಅವಧಿಯಲ್ಲಿ ನಮ್ಮ ತಂಡದಿಂದ ಸಾಧ್ಯವಾದಷ್ಟು ಉತ್ತಮ ಕಾರ್ಯಗಳನ್ನು ಮಾಡಿದ್ದೇವೆ. ಆ ಸಮಯದಲ್ಲಿ ಸಹಕಾರ ನೀಡಿದ ತಮಗೆಲ್ಲರಿಗೂ ಹೃತ್ಪೂರ್ವಕ ಅಭಿನಂದನೆಗಳು. ಆದರ್ಶ ಕುಲಕರ್ಣಿಯವರ ಅಧ್ಯಕ್ಷತೆಯಲ್ಲಿ ಈ ಹೊಸ ತಂಡ ಇನ್ನೂ ಉತ್ತಮ ಕಾರ್ಯಗಳನ್ನು ಮಾಡಲಿ ಎಂದು ಹಾರೈಸುತ್ತೇನೆ ಎಂದರು.

ಸಭೆಯನ್ನುದ್ದೇಶಿಸಿ ಹಿರಿಯ ಪತ್ರಕರ್ತ ಅರುಣ ಕುಲಕರ್ಣಿ, ಹಿಂದಿನ ಅಧ್ಯಕ್ಷರಾದ ಮೈಲಾರಪ್ಪ ಚಳ್ಳಮರದ, ನಿಂಗರಾಜ ಬೇವಿನಕಟ್ಟಿ, ಉಮೇಶ ನವಲಗುಂದ ಅನೇಕ ಸಲಹೆ ಸೂಚನೆಗಳನ್ನು ನೀಡಿದರು. ಸಭೆಯಲ್ಲಿ ಮಲ್ಲಯ್ಯ ಗುಂಡಗೋಪುರಮಠ, ಸಂಗಮೇಶ ಮೆಣಸಿಗಿ, ಗವಿಸಿದ್ದಪ್ಪ ಗೊಡಚಪ್ಪನವರ, ಸಿಕಂದರ ಆರಿ, ಪ್ರಶಾಂತ ಜಕ್ಕಲಿ ಮುಂತಾದವರು ಉಪಸ್ಥಿತರಿದ್ದರು.

ಸಂಘದ ನೂತನ ಗೌರವಾಧ್ಯಕ್ಷರಾಗಿ ಅರುಣ ಬಿ. ಕುಲಕರ್ಣಿ, ಅಧ್ಯಕ್ಷರಾಗಿ ಆದರ್ಶ ಕುಲಕರ್ಣಿ, ಉಪಾಧ್ಯಕ್ಷರಾಗಿ ಮಲ್ಲಯ್ಯ ಗುಂಡಗೋಪುರಮಠ, ಸಂಗಮೇಶ ಮೆಣಸಿಗಿ, ಕಾರ್ಯದರ್ಶಿಯಾಗಿ ಉಮೇಶ ನವಲಗುಂದ, ಸಹ ಕಾರ್ಯದರ್ಶಿಯಾಗಿ ಗವಿಸಿದ್ದಪ್ಪ ಗೊಡಚಪ್ಪನರ, ಖಜಾಂಚಿಯಾಗಿ ನಿಂಗರಾಜ ಬೇವಿನಕಟ್ಟಿ ಆಯ್ಕೆಯಾದರು.

---

# ಎನ್.ಎಸ್.ಎಸ್ ಸ್ವಯಂ ಸೇವಕನಿಗೆ ಮೆಚ್ಚುಗೆ



■ ವಿಜಯಸಾಕ್ಷಿ ಸುದ್ದಿ, ಗದಗ

ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಕೋಶವು ವಿಶ್ವವಿದ್ಯಾಲಯದ ಗಾಂಧೀ ಭವನದಲ್ಲಿ ಇತ್ತೀಚೆಗೆ ಆಯೋಜಿಸಿದ್ದ 'ವಿಶ್ವವಿದ್ಯಾಲಯ ಮಟ್ಟದ ನಾಯಕತ್ವ ತರಬೇತಿ ಶಿಬಿರ'ದಲ್ಲಿ ಹುಲಕೋಟಿಯ ಶ್ರೀ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಎನ್.ಎಸ್.ಎಸ್. ಘಟಕದ ಸ್ವಯಂ ಸೇವಕ ಮಾರುತಿ ಜಂಗ್ಲಿ ಭಾಗವಹಿಸಿದ್ದನು.

ಮಾರುತಿಗೆ ವಿಶ್ವವಿದ್ಯಾಲಯದ ಆವರಣದಲ್ಲಿ ಸಸಿ ನೆಡುವ ಕಾರ್ಯಕ್ರಮದ ನೇತೃತ್ವವನ್ನು ವಹಿಸಲಾಗಿತ್ತು. ಈತನು ತನ್ನ ತಂಡದೊಂದಿಗೆ ವಿಶ್ವವಿದ್ಯಾಲಯದ ಆವರಣದಲ್ಲಿ ನೂರಾರು ಸಸಿಗಳನ್ನು ನೆಟ್ಟು ಶಿಬಿರಾಧಿಕಾರಿಗಳ ಪ್ರಶಂಸೆಗೆ ಪಾತ್ರನಾಗಿದ್ದಾನೆ. ಈತನನ್ನು ಕಾಲೇಜಿನ ಸಿಡಿಸಿ ಪದಾಧಿಕಾರಿಗಳು, ಪ್ರಾಂಶುಪಾಲರು, ಸಿಬ್ಬಂದಿಗಳು ಮತ್ತು ಎನ್.ಎಸ್.ಎಸ್. ಘಟಕದ ಸಂಯೋಜಕ ಡಾ. ಅಪ್ಪಣ್ಣ ಹಂಜೆ ಅಭಿನಂದಿಸಿದ್ದಾರೆ.

---

# ಶ್ರೀ ಧರ್ಮಸ್ಥಳ ಸಿರಿ ಮಿಲೆಟ್ ಹೌಸ್ ಉದ್ಘಾಟನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸಿರಿಧಾನ್ಯಗಳು ಭವಿಷ್ಯದ ಆಹಾರವಾದಲ್ಲಿ ಮಾತ್ರ ಸದೃಢ ದೇಶ ಕಟ್ಟಲು ಸಾಧ್ಯ. ಈ ನೆಲೆಯಲ್ಲಿ ಪೂಜ್ಯ ಡಾ.ಡಿ ವೀರೇಂದ್ರ ಹೆಗ್ಗಡೆಯವರು ಯೋಜನೆಯ ಮೂಲಕ ರೈತರಲ್ಲಿ ಜಾಗೃತಿ ಮೂಡಿಸಿ ಸಿರಿಧಾನ್ಯಗಳನ್ನು ಬೆಳೆಸಿ ಆಹಾರವಾಗಿ ನೀಡುವ ಕಾರ್ಯ ಶ್ಲಾಘನೀಯ ಎಂದು ಪೂಜ್ಯಶ್ರೀ ಅಭಿನವ ಪಂಚಾಕ್ಷರ ಶಿವಾಚಾರ್ಯ ಸ್ವಾಮಿಗಳು ಹೇಳಿದರು.



ಅವರು ನಗರದಲ್ಲಿ ಧರ್ಮಸ್ಥಳ ಸಿರಿ ಮಿಲೆಟ್ ಹೌಸ್ ಉದ್ಘಾಟಿಸಿ ಮಾತನಾಡಿ, ಅಧರಕ್ಕೆ ಸಿಹಿ ಆಗಿರುವುದು ಉದರಕ್ಕೆ ಕಹಿ, ಅಧರಕ್ಕೆ ಕಹಿ ಆಗಿರುವುದು ಉದರಕ್ಕೆ ಸಿಹಿ. ನಾವು ಸೇವಿಸುವ ಆಹಾರದಲ್ಲಿ ಗುಣಮಟ್ಟ ಇಲ್ಲ. ಹಿಂದಿನ ಸಾಂಪ್ರದಾಯಕ ಆಹಾರ ಬಳಸುವ ಅವಶ್ಯಕತೆ ಇದೆ ಎಂದರು.

ಕಾರ್ಯಕ್ರಮದಲ್ಲಿ ಸಿರಿ ಮಿಲೆಟ್ ನಿರ್ದೇಶಕ ದಿನೇಶ್ ಎಂ., ಅತಿಥಿಗಳಾದ ರೋಟರಿ ಸೋಶಿಯಲ್ ಕಲ್ಚರ್ ಅಧ್ಯಕ್ಷ ವಿ.ಕೆ. ಗುರುಮಠ, ಪ್ರಾದೇಶಿಕ ನಿರ್ದೇಶಕ ಚಂದ್ರಶೇಖರ ಜೆ ಮಾತನಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ನಿರ್ದೇಶಕ ಯೋಗೀಶ ಎ., ಯೋಜನಾಧಿಕಾರಿ ಸುರೇಂದ್ರ ನಾಯ್ಕ್, ಮಾಲತೇಶ, ಸಿದ್ದರಾಮಪ್ಪ ಮಡಿವಾಳರ, ಸಿರಿ ಮಿಲೆಟ್ ಹೌಸ್ ಮಾಲೀಕರಾದ ಶರಣಪ್ಪ, ಮಂಜುಳಾ ಮುಂತಾದವರು ಉಪಸ್ಥಿತರಿದ್ದರು.

ಸಿರಿ ಮಿಲೆಟ್ ಮಾರುಕಟ್ಟೆ ಮೇಲ್ವಿಚಾರಕ ಶರಣಪ್ಪ, ವಲಯ ಮೇಲ್ವಿಚಾರಕಿ ಶಿಲ್ಪಾ ಮತ್ತು ಸೇವಾ ಪ್ರತಿನಿಧಿಗಳು ಉಪಸ್ಥಿತರಿದ್ದರು.

---

# ಮನೆ ಸಕ್ರಮಗೊಳಿಸುವಂತೆ ಮನವಿ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕಿನ ಯಲಿಶಿರೂರ ಗ್ರಾ.ಪಂಗೆ ಒಳಪಡುವ ಶಿರುಂಜ ಗ್ರಾಮದ ಅಕ್ರಮ ಮನೆಗಳನ್ನು ಸಕ್ರಮಗೊಳಿಸುವಂತೆ ಗದಗ ತಹಸೀಲ್ದಾರರಿಗೆ ಗ್ರಾಮದ ಅಕ್ರಮ-ಸಕ್ರಮ ನಿವಾಸಿಗಳು ಮನವಿ ಸಲ್ಲಿಸಿದರು.

ಯಲಿಶಿರೂರ ಗ್ರಾ.ಪಂಗೆ ಒಳಪಡುವ ಶಿರುಂಜ ಗ್ರಾಮದ 40 ಬಡ ಕುಟುಂಬಗಳಿಗೆ ಮನೆ ಇಲ್ಲದ ಕಾರಣ ಸರ್ಕಾರಿ ಜಾಗೆಯಲ್ಲಿ ಸುಮಾರು ದಿನಗಳಿಂದ ಮನೆ ನಿರ್ಮಿಸಿಕೊಂಡು ವಾಸಿಸುತ್ತಿದ್ದು, ಈ ಜಾಗೆಯನ್ನು ಅಕ್ರಮ-ಸಕ್ರಮ ಯೋಜನೆಯಲ್ಲಿ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿ ಸುಮಾರು 5 ವರ್ಷ ಕಳೆದರೂ ನೋಂದಣಿ ಪ್ರಕ್ರಿಯೆಯು ಮಂದಗತಿಯಲ್ಲಿ ಸಾಗುತ್ತಿದೆ. ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಬಡ ಕುಟುಂಬಗಳಿಗೆ ಅನುಕೂಲ ಮಾಡಿಕೊಡಬೇಕೆಂದು ಮನವಿಪತ್ರ ಸಲ್ಲಿಸಿ ವಿನಂತಿಸಿಕೊಂಡರು.


ಈ ಸಂದರ್ಭದಲ್ಲಿ ಫಕ್ಕೀರೇಶಪ್ಪ ಶಿಂಥೆ, ಲಕ್ಷ್ಮೀ ಮಂ. ಹುಯಿಲಗೋಳ, ಲಕ್ಷಪ್ಪ ಸೊನ್ನದ, ಮುತ್ತಪ್ಪ ಹಿತ್ತಲಮನಿ, ನಿಂಗರಡ್ಡಿ ಹೆಸರಡ್ಡಿ, ಬಸವರಾಜ ಪೂಜಾರ, ಉಡಚಪ್ಪ ಪೂಜಾರ, ಅರ್ಜುನ ಲೆಂಕೆನ್ನವರ, ಸುಭಾಸ ಮಳ್ಳಣ್ಣವರ, ಬಸವರಾಜ ಹುಲಿಕಟ್ಟಿ, ಅಲ್ಲಿಸಾಬ ನದಾಫ, ಚನ್ನವೀರಪ್ಪ ಹಡಪದ, ರಂಗಪ್ಪ ಲೆಂಕೆಣ್ಣವರ, ಮಾರುತಿ ಪೂಜಾರ, ಇಬ್ರಾಹಿಂಸಾಬ ನದಾಫ್, ಹನಮಂತ ಲೆಂಕೆಣ್ಣವರ, ಅಶೋಕ ಶಿಂಥೆ, ಶರಣಪ್ಪ ಲೆಂಕೆಣ್ಣವರ, ಮುಕ್ತುಂಸಾಬ ನದಾಫ್ ಉಪಸ್ಥಿತರಿದ್ದರು.

---

# ಶಿಕ್ಷಕರಿಂದ ತಹಸೀಲ್ದಾರರಿಗೆ ಮನವಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಜೆ ಅವಧಿಯಲ್ಲಿ ಮತಗಟ್ಟೆ ಹಂತದ ಅಧಿಕಾರಿ ಬಿಎಲ್‌ಓ ಆಗಿ ಕೆಲಸ ನಿರ್ವಹಿಸಿದ ಶಿಕ್ಷಕರಿಗೆ ಗಳಿಕೆ ರಜೆ ಮಂಜೂರು ಮಾಡುವ ಕುರಿತು ಆದೇಶ ನೀಡವಂತೆ ತಹಸೀಲ್ದಾರಿಗೆ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಹಾಗೂ ಸರ್ಕಾರಿ ನೌಕರ ಸಂಘದ ತಾಲೂಕು ಘಟಕಗಳ ವತಿಯಿಂದ ಶನಿವಾರ ಮನವಿ ಅರ್ಪಿಸಲಾಯಿತು.



ಈ ಸಂದರ್ಭದಲ್ಲಿ ನೌಕರರ ಸಂಘದ ಅಧ್ಯಕ್ಷ ಡಿ.ಎಚ್. ಪಾಟೀಲ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಎಸ್. ಹರ್ಲಾಪೂರ, ಪ್ರಧಾನ ಕಾರ್ಯದರ್ಶಿಗಳಾದ ಚಂದ್ರು ನೇಕಾರ ಹಾಗೂ ಎಮ್.ಎ. ನದಾಫ್, ಡಿ.ಡಿ. ಲಮಾಣಿ, ಎಲ್.ಎನ್. ನಂದೆಣ್ಣವರ, ಗೀತಾ ಹಳ್ಯಾಳ, ಬಿ.ಬಿ. ಯತ್ತಿನಹಳ್ಳಿ, ಪಿ.ಪಿ. ಹಿರೇಮಠ, ಗುರುರಾಜ ಹವಳದ ಹಾಜರಿದ್ದರು.

ಉಪ ತಹಸೀಲ್ದಾರ ಪ್ರಶಾಂತ ಕಿಮಾಯಿ ಹಾಗೂ ಕಂದಾಯ ನಿರೀಕ್ಷಕ ಬಿ.ಎಂ. ಕಾತ್ರಾಳ ಮನವಿ ಸ್ವೀಕರಿಸಿ ಸೂಕ್ತ ಕ್ರಮಕ್ಕೆ ಮೇಲಾಧಿಕಾರಿಗಳಿಗೆ ತಿಳಿಸುವದಾಗಿ ಹೇಳಿದರು

## ಕಪ್ಪತಗುಡ್ಡದಲ್ಲಿ ಚಾರಣ...

# ಪ್ರಕೃತಿ ಮಡಿಲಲ್ಲಿ ಪ್ರೆಸ್- ಪೊಲೀಸ್










ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ನೇತೃತ್ವದಲ್ಲಿ ಪೊಲೀಸ್ ಅಧಿಕಾರಿಗಳು, ಸಿಬ್ಬಂದಿಗಳ ತಂಡ ಹಾಗೂ ಮಾಧ್ಯಮ ಪ್ರತಿನಿಧಿಗಳ ತಂಡ ಕಪ್ಪತಗುಡ್ಡದಲ್ಲಿ ಚಾರಣ ನಡೆಸಿತು.







ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ನೇತೃತ್ವದಲ್ಲಿ ಚಾರಣ







ಕಪ್ಪತಗುಡ್ಡದ ಹಸಿರು ಸಿರಿಯಲ್ಲಿ ಪೊಲೀಸ್ ಮತ್ತು ಮಾಧ್ಯಮ ತಂಡ




















# ಎಚ್.ಎ. ಫಾರೂಕಿ ಸೇವಾ ನಿವೃತ್ತಿ ಇಂದು



■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಸರಕಾರಿ ಉರ್ದು ಪ್ರೌಢಶಾಲೆಯ ಮುಖ್ಯೋಪಾಧ್ಯಾಯ, ಗದಗ ಶಹರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಸಂಪನ್ಮೂಲ ಕೇಂದ್ರದ ಪ್ರಭಾರಿ ಸಮನ್ವಯ ಅಧಿಕಾರಿಯಾದ ಹಬೀಬುಲ್ಲಾ ಅಬ್ದುಲ್‌ಗಣಿ ಫಾರೂಕಿ ಅವರು ಜೂನ್ 30ರಂದು ವಯೋ ಸೇವಾ ನಿವೃತ್ತರಾಗಲಿದ್ದಾರೆ.

ಮೂಲತಃ ಗದಗ ತಾಲೂಕಿನ ಹುಯಿಲಗೋಳ ಗ್ರಾಮದವರಾದ ಫಾರೂಕಿ ಅವರು 1990-91ರಲ್ಲಿ ಭಟ್ಕಳದ ಅಂಜುಮನ್ ಹಾಮಿ-ಏ-ಮುಸ್ಲಿಂ ಪದವಿ ಮಹಾವಿದ್ಯಾಲಯದಿಂದ ವೃತ್ತಿ ಜೀವನ ಆರಂಭಿಸಿ, ವಿವಿಧ ಜಿಲ್ಲೆ, ತಾಲೂಕುಗಳಲ್ಲಿ ಸೇವೆ ಸಲ್ಲಿಸುತ್ತ ಗದುಗಿನ ಸರಕಾರಿ ಉರ್ದು ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸಿ ಇದೀಗ ಸೇವಾ ನಿವೃತ್ತರಾಗುತ್ತಿದ್ದು, ಇವರಿಗೆ ಡಿಡಿಪಿಐ ಎಂ.ಎ. ರಡ್ಡೇರ, ಬಿ.ಇ.ಓ ಆರ್.ಎಸ್. ಬುರಡಿ ಹಾಗೂ ಶಿಕ್ಷಕ ಬಳಗದವರು ಶುಭ ಕೋರಿದ್ದಾರೆ.

# ಡಾ. ಫ.ಗು. ಹಳಕಟ್ಟಿ, ಲಿಂಗಾನಂದ ಮಹಾಸ್ವಾಮಿಗಳ ಸ್ಮರಣೋತ್ಸವ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ರವಿವಾರ ಬೆಳಿಗ್ಗೆ 11ಕ್ಕೆ ನಡೆಯಲಿರುವ ಬಸವದಳದ 1600ನೇ ಶರಣ ಸಂಗಮದಲ್ಲಿ ವಚನ ಸಂಶೋಧನೆಯ ಪಿತಾಮಹ ಡಾ. ಫ.ಗು. ಹಳಕಟ್ಟಿಯವರ 60ನೇ ಸ್ಮರಣೋತ್ಸವ ಹಾಗೂ ಪ್ರವಚನ ಪಿತಾಮಹ ಪೂಜ್ಯ ಲಿಂಗಾನಂದ ಮಹಾಸ್ವಾಮಿಗಳವರ 29ನೇ ಸ್ಮರಣೋತ್ಸವ ಆಚರಣೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣ ಪ್ರೊ. ಸಿದ್ಧಲಿಂಗೇಶ ಯು.ಸಜ್ಜನಶೆಟ್ಟರ ಹಾಗೂ ಶರಣ ತತ್ವ ಚಿಂತಕ ಎಂ.ಬಿ. ಲಿಂಗಧಾಳ ಉಪನ್ಯಾಸ ಮಾಡುವರು.

ಕಾರಣ ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಿಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

### ವಿವಿಧ ಜಿಲ್ಲೆಯ ಕೃಷಿ ಸಾಧಕರಿಗೆ ಸನ್ಮಾನ ಕಾರ್ಯಕ್ರಮ

# ಸಾವಯವ ಕೃಷಿ ಮೂಲಕ ಪ್ರಕೃತಿಗೆ ಹಿಂತಿರುಗಿ



■ವಿಜಯಸಾಕ್ಷಿ ಸುದ್ದಿ, ನರೇಗಲ್

ನಮ್ಮ ದೇಶದಲ್ಲಿ ಕೃಷಿ ಕಾಯಕ ಮಾಡುವ ರೈತನಿಲ್ಲದಿದ್ದರೆ ಎಲ್ಲರೂ ತುತ್ತು ಅನ್ನಕ್ಕಾಗಿ ನರಳುವ ಪರಿಸ್ಥಿತಿ ನಿರ್ಮಾಣವಾಗುತ್ತಿತ್ತು. ಆದ್ದರಿಂದ ಕೃಷಿಗೆ ಪ್ರಥಮ ಆದ್ಯತೆ ನೀಡಬೇಕಾಗಿದೆ. ಹಣದ ವ್ಯಾಮೋಹದಲ್ಲಿ ತೇಲುತ್ತಿರುವ ಯುವ ಜನಾಂಗ ಪ್ರಕೃತಿ ಮಡಿಲಿಗೆ ಹಿಂದಿರುಗುವ ಅನಿವಾರ್ಯತೆ ಇದೆ ಎಂದು ದಾವಣಗೇರಿಯ ಕೃಷಿ ತಜ್ಞ ವೆಂಕಟ ರಾಮಾಂಜನಯ ಸ್ವಾಮಿ ಹೇಳಿದರು.

ಅವರು ಪಟ್ಟಣದ ಅನ್ನದಾನೇಶ್ವರ ಪ್ರೌಢಶಾಲೆಯ ಆವರಣದಲ್ಲಿ ಈಚೆಗೆ ನಡೆದ ವಿವಿಧ ಜಿಲ್ಲೆಯ ಕೃಷಿ ಸಾಧಕರ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮನುಷ್ಯ ಎದುರಿಸುತ್ತಿರುವ ಆರ್ಥಿಕ, ಆರೋಗ್ಯದ ಸಮಸ್ಯೆಗಳಿಗೆ ಪ್ರಕೃತಿ ಹಾಗೂ ಕೃಷಿ ಪರಿಹಾರ ನೀಡಲಿದೆ. ಪರಿಸರದಲ್ಲಿ ಸಿಗುವ ಔಷಧಿ ಗುಣಗಳ ನಾಟಿ ವೈದ್ಯಕೀಯ ಪದ್ಧತಿ ಭಾರತದ ಶ್ರೇಷ್ಠ ಪರಂಪರೆಯಾಗಿದ್ದು, ಇದನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ವ್ಯಾಪಕವಾಗಿ ಪ್ರಯತ್ನಗಳು ನಡೆಯಬೇಕು ಎಂದರು. ನಾಟಿ ಔಷಧಿ ಅನೇಕ ರೋಗಗಳಿಗೆ ಸುಲಭವಾಗಿ ನಾಟುವುದರಿಂದ ಆ ಹೆಸರು ಬಂದಿದೆ. ಇದಕ್ಕೆ ಸರಿಸಾಟಿ ಬೇರೆ ಯಾವುದೂ ಇಲ್ಲ, ಭೌತಿಕ ಬಡತನ ಹಾಗೂ ಸಂಕುಚಿತ ಭಾವನೆಯಿಂದ ಈ ಪದ್ಧತಿ ಮೊಟಕುಗೊಳ್ಳುತ್ತಿದೆ ಎಂದರು.

ಕಲಘಟಗಿಯ ನೈಸರ್ಗಿಕ ಕೃಷಿಕ ನಿಂಗಯ್ಯ ಹಿರೇಮಠ ಮಾತನಾಡಿ, ನಮ್ಮ ಪೂರ್ವಜರ ಕಾಲದಿಂದಲೂ ಸಾವಯವ ಗೊಬ್ಬರಗಳನ್ನು ಬಳಸಿ ಬೇಸಾಯ ಮಾಡುತ್ತಾ ಬಂದಿದ್ದೇವೆ. ಆದರೆ ಇತ್ತೀಚಿನ ದಿನಗಳಲ್ಲಿ ಕೃಷಿಗೆ ಉಪಯುಕ್ತವಲ್ಲದ ರಾಸಾಯನಿಕ ಗೊಬ್ಬರಗಳನ್ನು ಬಳಕೆ ಮಾಡುವ ಮೂಲಕ ಭೂಮಿಯ ಫಲವತ್ತತೆ ಹಾಗೂ ಸಮುದಾಯದ ಆರೋಗ್ಯವನ್ನು ಹಾಳು ಮಾಡಲಾಗುತ್ತದೆ. ಆದ್ದರಿಂದ ರೈತರು ಸಾವಯವ ಹಾಗೂ ನೈಸರ್ಗಿಕ ಕೃಷಿ ಪದ್ಧತಿಗೆ ಮರಳಬೇಕು ಎಂದರು. ಸಾವಯವ ಕೃಷಿ ಪದ್ಧತಿಯಲ್ಲಿ ಬೆಳೆದ ತರಕಾರಿ ಹಾಗೂ ಆಹಾರಧಾನ್ಯ ಸೇವಿಸುವ ಮೂಲಕ ಸದೃಢ ಆರೋಗ್ಯ ಕಾಪಾಡಿಕೊಳ್ಳಬೇಕಾಗಿದೆ ಎಂದು ಸಲಹೆ ನೀಡಿದರು.

ಈ ವೇಳೆ ಕೋಟುಮಚಗಿ ಸಾವಯವ ಕೃಷಿ ವೀರೇಶ ನೇಗಲಿ, ಬಸವರಾಜ ದಿಂಡೂರ, ಜಿ.ಪಿ. ಪಾಟೀಲ, ಬಾವಿ ಬೆಟ್ಟಪ್ಪ, ಸೋಮಣ್ಣ ಡಾಣಗಲ್ಲ, ವೀರಣ್ಣ ಕರಿಬಿಷ್ಠಿ, ಶಕುಂತಲಾ ಸಿಂಧೂರ, ಜಿ.ಎ. ಪಾಟೀಲ ಇದ್ದರು.

ಕೃಷಿಯಲ್ಲಿ ಸಾಧನೆ ಮಾಡಿದ ಧಾರವಾಡ ಕೃಷಿ ವಿಶ್ವವಿದ್ಯಾಲಯದ ಗೋಪಾಲ, ದಾವಣಗೇರಿಯ ಕೃಷಿ ತಜ್ಞ ವೆಂಕಟ ರಾಮಾಂಜನಯ ಸ್ವಾಮಿ, ಶಿರಹಟ್ಟಿಯ ಸಾವಯವ ಕೃಷಿಕ ಬಸವರಾಜ ನಾವಿ, ಬೆಳಗಾವಿಯ ಸಾವಯವ ಕೃಷಿಕ ತುಕಾರಾಮ ನಾಯಕ, ಕಲಘಟಗಿಯ ನೈಸರ್ಗಿಕ ಕೃಷಿಕ ನಿಂಗಯ್ಯ ಹಿರೇಮಠ, ರಟ್ಟಿಹಳ್ಳಿಯ ಕೃಷಿತಜ್ಞೆ ಸೌಭಾಗ್ಯ ಬಸನಗೌಡ್ರ ಇವರಿಗೆ ಸನ್ಮಾನಿಸಲಾಯಿತು.

### ಗದಗ ಜಿಲ್ಲಾ ಬಿಜೆಪಿ ರೈತ ಮೋರ್ಚಾವತಿಯಿಂದ ರಾಜ್ಯ ಸರ್ಕಾರದ ವಿರುದ್ಧ ಪ್ರತಿಭಟನೆ

# ರೈತವಿರೋಧಿ ರಾಜ್ಯ ಸರ್ಕಾರ ವಿಸರ್ಜನೆಯಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ರೈತ ಮೋರ್ಚಾ ವತಿಯಿಂದ ಜಿಲ್ಲಾಧಿಕಾರಿಗಳ ಮುಖಾಂತರ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ರಾಜು ಕುರಡಗಿ ಮಾತನಾಡಿ, ಕಳೆದ ಬಜೆಟ್‌ನಲ್ಲಿ ಪ್ರೋತ್ಸಾಹ ಧನಕ್ಕೆ ಬಿಡುಗಡೆಯಾಗಿದ್ದ ಹಣವನ್ನು ಪಶುಪಾಲನಾ ಇಲಾಖೆ ಇತರೆ ಖರ್ಚು ವೆಚ್ಚಗಳಿಗೆ ಬಳಕೆ ಮಾಡಿಕೊಂಡಿದೆ ಎಂಬ ಆರೋಪ ಕೇಳಿಬಂದಿದೆ. ಈ ವಿಷಯದ ಬಗ್ಗೆ ಸರ್ಕಾರ ಸ್ಪಷ್ಟನೆಯನ್ನು ನೀಡಬೇಕು. ಬಾಕಿ ಉಳಿದಿರುವ ಎಂಟು ತಿಂಗಳ ಹಣವನ್ನು ಯಾವಾಗ ಕೊಡುತ್ತಾರೆ ಎಂದು ರೈತರು ಪ್ರಶ್ನಿಸಿದರೆ, ಹಾಲು ಒಕ್ಕೂಟದ ಅಧಿಕಾರಿಗಳು ಸಹಕಾರಿ ಇಲಾಖೆಯತ್ತ ಬೊಟ್ಟು ಮಾಡುತ್ತಾರೆ. ಸಹಕಾರ ಇಲಾಖೆಯವರು ಆರ್ಥಿಕ ಇಲಾಖೆ ಮೇಲೆ ಬೊಟ್ಟು ಮಾಡುತ್ತಾರೆ. ಈ ಗೊಂದಲದ ಬಗ್ಗೆ ರೈತರಿಗೆ ಮನವರಿಕೆ ಮಾಡಿಕೊಡಬೇಕು ಎಂದರು.



ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿಗಳಾದ ರಮೇಶ ವಕ್ಕರ, ಅಶೋಕ ಕರೂರ ಮಾತನಾಡಿ, ಹಾಲಿನ ಪ್ರೋತ್ಸಹ ಧನವೂ ಇಲ್ಲ, ಬರ ಪರಿಹಾರದ ಹಣವೂ ಇಲ್ಲ. ಬಿತ್ತನೆ ಬೀಜಗಳ ಬೆಲೆ ಏರಿಕೆಯಾಗಿದೆ. ಭೂ ಸಿರಿ ಯೋಜನೆಯನ್ನು ನಿಲ್ಲಿಸಲಾಗಿದೆ, ರೈತ ವಿದ್ಯಾನಿಧಿ ಯೋಜನೆಯನ್ನು ನಿಲ್ಲಿಸಲಾಗಿದೆ ಮತ್ತು ರೈತರಿಗೆ ಅತ್ಯಂತ ನಿಕಟವಾಗಿರುವ ಕಂದಾಯ ಇಲಾಖೆಯಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿದೆ. ನ್ಯಾಯಮೂರ್ತಿ ನಾಗಮೋಹನ್‌ದಾಸ್ ಆಯೋಗ ಕಳೆದ ಒಂದು ವರ್ಷದಿಂದ ಸಮರ್ಪಕವಾಗಿ ತನಿಖೆ ನಡೆಸುತ್ತಿಲ್ಲ ಎಂದು ನ್ಯಾಯಾಲಯ ಛೀಮಾರಿ ಹಾಕಿದೆ. ಬೆಲೆ ಏರಿಕೆಯನ್ನು ಬಳುವಳಿಯಾಗಿ ಕೊಟ್ಟ ಕಾಂಗ್ರೆಸ್ ಸರ್ಕಾರ ವಿದ್ಯುತ್ ದರ, ಪಶು ಆಹಾರಕ್ಕೆ ಪ್ರತಿ ಮೆಟ್ರಿಕ್ ಟನ್‌ಗೆ ರೂ. 500 ಹೆಚ್ಚಿಸಿದೆ ಎಂದರು.

ಈ ಸಂದರ್ಭದಲ್ಲಿ ಪ್ರಮುಖರಾದ ಶ್ರೀಪತಿ ಉಡುಪಿ, ಬಿ.ಎಸ್. ಚಿಂಚಲಿ, ಅಶೋಕ ಸಂಕಣ್ಣವರ, ಸಿದ್ದಪ್ಪ ಈರಗಾರ, ಶಂಕರ ಕರಿಬಿಷ್ಠಿ, ಪಕ್ಕಿರೇಶ ರಟ್ಟಿಹಳ್ಳಿ, ಶಿವಪ್ಪ ಮುಳ್ಳಾಳ, ಪ್ರಭು ಕಲಬಂಡಿ, ಗುರುಶಾಂತಗೌಡ ಮರೀಗೌಡ್ರ, ಸಂತೋಷ ಅಕ್ಕಿ, ಮಹೇಶ ಶಿರಹಟ್ಟಿ, ಸುಧೀರ ಕಾಟಿಗರ, ಗಂಗಾಧರ ಹಬೀಬ, ದೇವಪ್ಪ ಗೊಟೂರ, ವಿಶ್ವನಾಥ ಟೆಂಗಿನಕಾಯಿ, ಸುರೇಶ ಮರಳಪ್ಪನವರ, ಸುರೇಶ ಚಿತ್ತರಗಿ, ಸಿದ್ರಾಮೇಶ ಹಿರೇಮಠ, ಮುತ್ತಣ್ಣ ಮೂಲಿಮನಿ, ವಿಜಯ ಕುರ್ತಕೋಟಿ, ಶಾಂತಯ್ಯ ಮುತ್ತಿನಪೆಂಡಿಮಠ, ಇರ್ಷಾದ ಮಾನ್ವಿ, ಚನ್ನಮ್ಮ ಹುಳಕಣ್ಣವರ, ವಿಶ್ವನಾಥ ಶಿರಿಗಣ್ಣವರ, ರವಿ ಸಿದ್ಲಿಂಗ, ಕಮಲಾಕ್ಷಿ ಅಂಗಡಿ, ಶಿವಾಜಿ ಚವ್ಹಾಣ ಸೇರಿದಂತೆ ಹಲವಾರು ಪ್ರಮುಖರು ಉಪಸ್ಥಿತರಿದ್ದರು.

ಹಾಲಿನ ದರವನ್ನು ರೂ.4ರಷ್ಟು ಏರಿಸಿ ಆ ಹಣವನ್ನು ರೈತರಿಗೆ ತಲುಪಿಸಲಾಗುವುದು ಎಂದು ಹೇಳಿಕೆ ಕೊಟ್ಟು, ಏಕೆ ರೈತರಿಗೆ ತಲುಪಿಸಿಲ್ಲ. ಮತ್ತೆ ಈಗ ಅದೇ ಕಾರಣವನ್ನು ನೀಡಿ 2 ರೂ ಹೆಚ್ಚಿಸಲಾಗಿದೆ. ರಾಜ್ಯದ ಕಾಂಗ್ರೆಸ್ ಸರ್ಕಾರದ ರೈತ ವಿರೋಧಿ ಧೋರಣೆಗಳಿಗೆ ಇವೆಲ್ಲ ಸಾಕ್ಷಿಯಾಗಿವೆ. ಇಂತಹ ಸರ್ಕಾರ ಅಧಿಕಾರದಲ್ಲಿರಬಾರದು. ಕೂಡಲೇ ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರವನ್ನು ವಜಾಗೊಳಿಸಿ ರಾಜ್ಯದ ರೈತರನ್ನು ಕಾಪಾಡಲಿ ಎಂದು ಆಗ್ರಹಿಸಿದರು.

# ಸರ್ಕಾರಿ ಶಾಲೆಯತ್ತ ಗಮನಹರಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿಕ್ಷಣ ಪ್ರತಿಯೊಬ್ಬ ವ್ಯಕ್ತಿಯ ಬದುಕಿನ ಬೆಳಕಾಗಿದೆ. ಸಮಾಜದ ಕಟ್ಟಕಡೆಯ ಮಗುವಿಗೂ ಖಾಸಗಿ ಶಾಲೆಗಳಲ್ಲಿ ಸಿಗುವ ಸಕಲ ಸೌಲಭ್ಯಯುತ, ಗುಣಮಟ್ಟದ ಶಿಕ್ಷಣ ಸರ್ಕಾರಿ ಶಾಲೆಗಳಲ್ಲಿಯೂ ಸಿಗಬೇಕೆಂದು ಶಾಸಕ ಡಾ.ಚಂದ್ರು ಲಮಾಣಿ ಹೇಳಿದರು.

ಅವರು ಶನಿವಾರ ತಾಲೂಕಿನ ಕುಂದ್ರಳ್ಳಿ ತಾಂಡಾದಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಯ ವಿವೇಕ ಕೊಠಡಿ ಉದ್ಘಾಟನೆ ನೆರವೇರಿಸಿ ಮಾತನಾಡಿ, ಸರ್ಕಾರಿ ಶಾಲೆಗೆ ತಮ್ಮ ಮಕ್ಕಳನ್ನು ಸೇರಿಸಲು ಪಾಲಕರು ಹಿಂದೇಟು ಹಾಕುತ್ತಿದ್ದಾರೆ. ಆ ಮನೋಭಾವನೆ ಹೋಗಬೇಕು, ಆಳುವ ಎಲ್ಲ ಸರ್ಕಾರಗಳು ಮಕ್ಕಳಿಗೆ



ಉಚಿತ ಶಿಕ್ಷಣಕ್ಕಾಗಿ ಸಾಕಷ್ಟು ಅನುದಾನ ನೀಡುತ್ತಾ ಬಂದಿವೆ. ಎಲ್ಲ ಪಾಲಕರು, ಮಕ್ಕಳು ಸರ್ಕಾರಿ ಶಾಲೆಯಯತ್ತ ಗಮನಹರಿಸಬೇಕು. ಪಾಲಕರು ಮಕ್ಕಳನ್ನು ಶಾಲೆಗೆ ತಪ್ಪದೇ ಕಳುಹಿಸಬೇಕು. ಪ್ರಾಥಮಿಕ ಶಾಲಾ ಹಂತದಲ್ಲಿ ಗುಣಮಟ್ಟದ ಶಿಕ್ಷಣ ಮಕ್ಕಳಿಗೆ ಸಿಕ್ಕರೆ ಮಕ್ಕಳ ಶೈಕ್ಷಣಿಕ ಸಾಧನೆಗೆ ಮುನ್ನುಡಿಯಾಗುತ್ತದೆ. ಕ್ಷೇತ್ರದಲ್ಲಿ ಶಾಲೆಗಳ ಅಭಿವೃದ್ಧಿ, ಶೈಕ್ಷಣಿಕ ಪ್ರಗತಿಗೆ ಮೊದಲ ಪ್ರಾಶಸ್ತ್ಯ ನೀಡುತ್ತೇನೆ ಎಂದರು.

ಈ ವೇಳೆ ಶಾಲೆಯ ಶಿಕ್ಷಕರು ಮತ್ತು ಶಾಲಾ ಆಡಳಿತ ಮಂಡಳಿ ಶಾಸಕರಿಗೆ ಶಾಲೆಯ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗಾಗಿ ಮನವಿ ಸಲ್ಲಿಸಿದರು. ಈ ವೇಳೆ ಡಿಡಿಪಿಐ ಎಂ.ಎ. ರಡ್ಡೇರ, ಬಿಇಓ ಎಚ್.ಎನ್. ನಾಯಕ, ಮಹೇಶ ಲಮಾಣಿ, ಈಶ್ವರಪ್ಪ ರಾಠೋಡ, ಶಾಂತವ್ವ ಹಡಪದ, ಮಲ್ಲವ್ವ ತಳವಾರ, ಬಸವರಾಜ ಲಮಾಣಿ, ಹಬಸಪ್ಪ ಲಮಾಣಿ, ರಮೇಶ ಲಮಾಣಿ, ಸಂತೋಷ ಲಮಾಣಿ ಸೇರಿ ಗ್ರಾಮದ ಹಿರಿಯರು, ಪಾಲಕರು ಪಾಲ್ಗೊಂಡಿದ್ದರು. ಮುಖ್ಯ ಶಿಕ್ಷಕರಾದ ಆರ್.ಎಸ್. ಅರಮನಿ ಪ್ರಾಸ್ತಾವಿಕ ನುಡಿದರು. ಶಿಕ್ಷಕರಾದ ಎಸ್.ವಿ. ಸೋಗಿ, ಬಿ.ಎಂ. ಸರವಿ ನಿರ್ವಹಿಸಿದರು.

### ಹರ್ಲಾಪೂರ ಹಠಯೋಗಿ ಕೊಟ್ಟೂರೇಶ್ವರರ ಪುರಾಣ ಮಂಗಲೋತ್ಸವ

# ಪುರಾಣ ಕೇವಲ ಜೀವನ ಚರಿತ್ರೆಯಲ್ಲ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

12ನೇ ಶತಮಾನದಲ್ಲಿದ್ದ ಶರಣ-ಶರಣೆಯರು ಈ ಸಮಾಜದಲ್ಲಿಯ ಅಜ್ಞಾನದ ಅಂಧಕಾರವನ್ನು ತೆಗೆದು ಹಾಕಲು ಶ್ರಮಿಸಿದ್ದಾರೆ. ಇವರ ಹಾದಿಯಲ್ಲಿಯೇ ಹರ್ಲಾಪೂರದ ಹಠಯೋಗಿ ಕೊಟ್ಟೂರೇಶ್ವರ ಮಹಾಸ್ವಾಮಿಗಳು ಈ ಭಾಗದಲ್ಲಿ ಹಲವಾರು ಪವಾಡಗಳನ್ನು ಸೃಷ್ಟಿಸುವ ಮೂಲಕ ಅಜ್ಞಾನದ ಅಂಧಕಾರವನ್ನು ಹೊಡೆದೋಡಿಸಲು ಶ್ರಮಿಸಿದ್ದಾರೆ ಎಂದು ಹಿರೇವಡ್ಡಟ್ಟಿ ಹಿರೇಮಠದ ವೀರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಇಲ್ಲಿಯ ಸಮೀಪದ ಹರ್ಲಾಪೂರ ಕೊಟ್ಟೂರೇಶ್ವರ ಮಠದ ಜಾತ್ರಾ ಮಹೋತ್ಸವದಂಗವಾಗಿ 15 ದಿನಗಳ ಕಾಲ ಹಮ್ಮಿಕೊಂಡಿದ್ದ ಹಠಯೋಗಿ ಕೊಟ್ಟೂರೇಶ್ವರರ ಪುರಾಣ ಮಂಗಲೋತ್ಸವದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಹಠಯೋಗಿ ಕೊಟ್ಟೂರೇಶ್ವರರ ತಪೋಶಕ್ತಿಯಿಂದ ಈ ಸ್ಥಳವು ಜಾಗೃತಿಯ ನೆಲೆಯಾಗಿದ್ದು, ಭಕ್ತರು ಈ ಮಠದ ಸೇವೆಯಲ್ಲಿ ಪಾಲ್ಗೊಂಡು ಇಲ್ಲಿ



ನಡೆಯುವ ಪ್ರತಿಯೊಂದು ಧಾರ್ಮಿಕ ಕಾರ್ಯದಲ್ಲಿ ತೊಡಗಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಅಡ್ನೂರು-ರಾಜೂರು ಬೃಹನ್ಮಠದ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ, ಪುರಾಣ ಎನ್ನುವುದು ಕೇವಲ ಒಬ್ಬರ ಜೀವನ ಚರಿತ್ರೆಯಲ್ಲ. ಅದರಲ್ಲಿಯ ಮೌಲ್ಯಾಧಾರಿತ ಅಂಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಭವಿಷ್ಯವನ್ನು ರೂಪಿಸಿಕೊಳ್ಳಬೇಕೆಂದು ಹೇಳಿದರು.

ಸೊರಟೂರು ಓಂಕಾರೇಶ್ವರ ಹಿರೇಮಠದ ಫಕ್ಕೀರೇಶ್ವರ ಶಿವಾಚಾರ್ಯ ಸ್ವಾಮಿಗಳು, ಡಾ. ಕೊಟ್ಟೂರೇಶ್ವರ ಶ್ರೀಗಳು ಮಾತನಾಡಿದರು. ವಿ.ಬಿ. ಸೋಮನಕಟ್ಟಿಮಠ, ಗೋವಿಂದರೆಡ್ಡಿ ಕೊಣ್ಣೂರು, ಸಿದ್ದು ಆಲೂರು, ಶರಣಪ್ಪಗೌಡ್ರ ಪಾಟೀಲ, ಶ್ರೀನಿವಾಸ ಮಾನೆ, ಸುರೇಶ ಅಂಗಡಿ, ನಿವೃತ್ತ ಶಿಕ್ಷಕ ರಾಮಣ್ಣ ಬೆಳಧಡಿ, ರಾಮಣ್ಣ ಹುಯಿಲಗೋಳ ಉಪಸ್ಥಿತರಿದ್ದರು.

ಪುರಾಣ ಪ್ರವಚನ ಮಂಗಲ ಮಾಡಿದ ಯಾದಗಿರಿಯ ಖೆಳಗಿಮಠದ ಮಲ್ಲಿಕಾರ್ಜುನಶಾಸ್ತ್ರಿಗಳು ಹಿರೇಮಠ ಅವರಿಗೆ 'ಪುರಾಣ ಪ್ರವೀಣ' ಎಂಬ ಬಿರುದು ನೀಡಿ ಗೌರವಿಸಲಾಯಿತು. ಸೇವೆ ಸಲ್ಲಿಸಿದ ಮಹನೀಯರನ್ನು ಶ್ರೀಮಠದಿಂದ ಸನ್ಮಾನಿಸಲಾಯಿತು. ಕೆ.ಬಿ. ವೀರಾಪೂರ, ಮಂಜುನಾಥ ಅರ್ಕಸಾಲಿ ಸಂಗೀತ ಸೇವೆ ನೀಡಿದರು. ಸಿದ್ದಲಿಂಗಯ್ಯ ಹಿರೇಮಠ ಸ್ವಾಗತಿಸಿದರು. ಮುಖ್ಯೋಪಾಧ್ಯಾಯ ಕೆ.ಬಿ. ಕೊಣ್ಣೂರು ಪ್ರಾಸ್ತಾವಿಕವಾಗಿ ಮಾತನಾಡಿದರು. ವೆಂಕಟೇಶ ಜುಂಜಣಿ ನಿರೂಪಿಸಿದರು. ಪ್ರಾಧ್ಯಾಪಕ ಡಾ. ಎಸ್.ಸಿ. ಸರ್ವಿ ವಂದಿಸಿದರು.

ರೋಣ ಪುರಸಭೆ ಉಪಾಧ್ಯಕ್ಷ ಮಿಥುನ್ ಪಾಟೀಲ ಮಾತನಾಡಿ, ನಮ್ಮ ನಾಡಿನ ಶ್ರದ್ಧಾ ಕೇಂದ್ರಗಳು ಭಕ್ತರಲ್ಲಿ ಮಾನವೀಯ ಮೌಲ್ಯಗಳನ್ನು ನೀಡುವ ಕೇಂದ್ರಗಳಾಗಿವೆ. ಈ ನಿಟ್ಟಿನಲ್ಲಿ ಕೊಟ್ಟೂರೇಶ್ವರ ಮಠವು ಪ್ರಸಿದ್ಧಿಯಾಗಿದೆ. ಹಠಯೋಗಿಗಳಿಂದ ಈ ಮಠದ ಶಕ್ತಿಯು ಅಪಾರವಾಗಿದ್ದು, ನಾವೆಲ್ಲರೂ ಕೊಟ್ಟೂರೇಶ್ವರರ ಪುರಾಣದಲ್ಲಿ ಬರುವ ಹಲವಾರು ಸಂದೇಶಗಳನ್ನು ಅಳವಡಿಸಿಕೊಳ್ಳುವುದು ಅವಶ್ಯವಾಗಿದೆ ಎಂದರು.

### ಪಠ್ಯೇತರ ಚಟುವಟಿಕೆಗಳ ಮುಕ್ತಾಯ ಸಮಾರಂಭದಲ್ಲಿ ಡಾ. ರಾಜಶೇಖರ ದಾನರಡ್ಡಿ

# ಸತತ ಓದು ಯಶಸ್ಸಿಗೆ ಮೆಟ್ಟಿಲು

■ವಿಜಯಸಾಕ್ಷಿ ಸುದ್ದಿ, ರೋಣ

ವರ್ಷದುದ್ದಕ್ಕೂ ಆಟೋಟ, ವಿವಿಧ ಸ್ಪರ್ಧೆಗಳಲ್ಲಿ ನಿಮ್ಮ ಪ್ರತಿಭೆ ತೋರಿದಂತೆ ಇನ್ನು ಅಭ್ಯಾಸದತ್ತ ಗಮನ ಹರಿಸಿ. ಸತತ ಓದು ಯಶಸ್ಸಿನ ಮೆಟ್ಟಿಲು ಎಂದು ಗದಗ ನಗರದ ಪಿ.ಪಿ.ಜಿ ಕಲಾ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ರಾಜಶೇಖರ ದಾನರಡ್ಡಿ ಹೇಳಿದರು.

ಅವರು ಹೊಳೆಆಲೂರಿನ ಶ್ರೀ ಕವಿಪ್ರ ಸಮಿತಿಯ ಕಲಾ, ವಿಜ್ಞಾನ, ವಾಣಿಜ್ಯ ಮಹಾವಿದ್ಯಾಲಯ ಹಾಗೂ ಕನ್ನಡ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಪಠ್ಯೇತರ ಚಟುವಟಿಕೆಗಳ ಮುಕ್ತಾಯ ಸಮಾರಂಭದ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡುತ್ತಿದ್ದರು.

ಪಠ್ಯದಷ್ಟೇ ಪಠ್ಯೇತರ ಚಟುವಟಿಕೆಗಳು ವಿದ್ಯಾರ್ಥಿಗಳಿಗೆ ಮುಖ್ಯವಾಗಿದ್ದು, ನಮ್ಮ ಪ್ರತಿಭೆಗಳನ್ನು ಬೆಳಕಿಗೆ ತರಲು ವಿವಿಧ ವಿಭಾಗಗಳು ಇರುತ್ತವೆ. ಓದಿಗೆ ದೈಹಿಕ ಆರೋಗ್ಯವೂ ಅಗತ್ಯ. ಹಾಗಾಗಿ ಆರೋಗ್ಯದ ಕಾಳಜಿ ನಿಮಗಿರಲಿ. ಪರೀಕ್ಷೆ ನಿಮ್ಮ ಭವಿಷ್ಯದ ಜೀವನ ರೂಪಿಸುವಲ್ಲಿ ಕಾರಣವಾಗುವದರಿಂದ ಓದಿನ ಕಡೆ ಹೆಚ್ಚು ಗಮನ



ಹರಿಸಿ ಎಂದು ಕಿವಿಮಾತು ಹೇಳಿದರು.

ಅಧ್ಯಕ್ಷತೆಯನ್ನು ಪ್ರಾಚಾರ್ಯ ಡಾ.ಪ್ರಭು ಗಂಜಿಹಾಳ ವಹಿಸಿದ್ದರು. ವೇದಿಕೆಯಲ್ಲಿ ಕವಿಪ್ರ ಸಮಿತಿ ನಿರ್ದೇಶಕರಾದ ಜಿ.ಆರ್. ಕಂಬಿ, ಐಕ್ಯೂಎಸಿ ಕೋ-ಆರ್ಡಿನೇಟರ್ ಡಾ. ಎಸ್.ಬಿ. ಸಜ್ಜನರ್, ಸಾಂಸ್ಕೃತಿಕ ವಿಭಾಗದ ಕಾರ್ಯಾಧ್ಯಕ್ಷ, ಎನ್‌ಎಸ್‌ಎಸ್ ಯೋಜನಾಧಿಕಾರಿ ಪ್ರೊ. ವಿಶ್ವನಾಥ ಪಾಟೀಲ, ಮಹಾವಿದ್ಯಾಲಯದ ಪ್ರಧಾನ ಕಾರ್ಯದರ್ಶಿ ರವಿಚಂದ್ರ ಕುರಿ, ಮಹಿಳಾ ಪ್ರತಿನಿಧಿ ಅನಿತಾ ಅಂಗಡಕಿ ಉಪಸ್ಥಿತರಿದ್ದರು.

ಪೂಜಾ ಬೆಳವಲ, ಅಕ್ಷತಾ ಮಣ್ಣೂರ ಪ್ರಾರ್ಥಿಸಿದರು. ಬಹುಮಾನ ವಿತರಣೆ ಕಾರ್ಯಕ್ರಮವನ್ನು ಪ್ರೊ. ರೇಷ್ಮಾ ಟೆಕ್ಕೇದ ನಡೆಸಿಕೊಟ್ಟರು. ಮಧು ಗಾಣಿಗೇರ ಸ್ವಾಗತಿಸಿದರು. ಮಧು ತಳವಾರ ನಿರೂಪಿಸಿದರು. ಮಹಾದೇವಿ ಗೋಲಗೌಡ್ರ ವಂದಿಸಿದರು. ಸ್ನಾತಕೋತ್ತರ ಕನ್ನಡ ವಿಭಾಗದ ಸಂಯೋಜನಾಧಿಕಾರಿ ಪ್ರೊ. ಎಂ.ಎಸ್. ಬೇವೂರ, ಪ್ರೊ. ಎನ್.ಆರ್. ಹಿರೇಸಕ್ಕಗೌಡರ, ಪ್ರೊ. ಎಸ್.ವಾಯ್. ಪೂಜಾರ್, ಡಾ.ಕುಮಾರ ಹಂಜಗಿ, ಪ್ರೊ. ಎಂ.ಎಸ್. ಹೊನವಾಡ, ಪ್ರೊ. ಕೆ.ಎ. ಕೊಪ್ಪದ, ಪ್ರೊ. ಎಸ್.ಬಿ. ಹಳ್ಳೂರ, ಪ್ರೊ. ಶಿಲ್ಪಾ ಮೆದನಾಪೂರ, ಪ್ರೊ. ವಿನೋದ ಕಪ್ಪಲಿ, ಪ್ರೊ. ವಿ.ಬಿ. ಜಾಲಿಹಾಳ, ಪ್ರೊ. ಆನಂದ ಕೆಂಚನಗೌಡರ, ಪ್ರೊ. ಎಸ್.ಪಿ. ಗಡಗಿ, ಎಸ್.ಜಿ. ಮಾಳವಾಡ ಮುಂತಾದವರಿದ್ದರು.

ಅತಿಥಿಗಳಾಗಿ ಆಗಮಿಸಿದ್ದ ಕವಿಪ್ರ ಸಮಿತಿ ನಿರ್ದೇಶಕ ಡಿ.ಎಸ್. ಶೆಲ್ಲಿಕೇರಿ ಮಾತನಾಡಿ, ವಿದ್ಯಾರ್ಥಿಗಳು ವೇಳೆಯನ್ನು ವ್ಯರ್ಥ ಮಾಡದೆ ಓದಿನ ಕಡೆ ಲಕ್ಷ್ಯ ಕೊಟ್ಟು ಸಂಸ್ಥೆಗೆ ಹೆಸರು ತನ್ನಿ ಎಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka